ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 140 RNI Number : KNKAN/25/A2770 29-05-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :140 ರಾಯಚೂರು 29-05-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ಸಿದ್ದು ಸಿಎಂ ಅಧಿಕಾರ ಅಂತ್ಯ, ಡಿಕೆಶಿ ಸಿಎಂ ಯುಗ ಆರಂಭ

ಬೆಂಗಳೂರು: ಕಾಂಗ್ರೆಸ್ ಹೈಕಮಾಂಡ್ ಸೂಚನೆಯಂತೆ ಸಿದ್ದರಾಮಯ್ಯ ಅವರು ಇಂದು ಸಿಎಂ ಸ್ಥಾನಕ್ಕೆ ರಾಜೀನಾಮೆ ಪತ್ರ ಸಲ್ಲಿಸಿದರು.

ಮಧ್ಯಾಹ್ನ 3 ಗಂಟೆಗೆ ರಾಜೀನಾಮೆ ಪತ್ರವನ್ನು ಸಿದ್ದರಾಮಯ್ಯ ಅವರು ರಾಜಭವನದ ಕಾರ್ಯದರ್ಶಿಗೆ ಸಲ್ಲಿಸಿದರು. ರಾಜ್ಯಪಾಲರ ಪರವಾಗಿ ಲೋಕಭವನ ಕಾರ್ಯದರ್ಶಿ ಅವರು ರಾಜೀನಾಮೆ ಪತ್ರವನ್ನು ಸ್ವೀಕರಿಸಿದರು. ಡಿ.ಕೆ. ಶಿವಕುಮಾರ್ ಸೇರಿದಂತೆ ಇನ್ನಿತರ ಸಚಿವರೊಂದಿಗೆ ಆಗಮಿಸಿದ್ದ ಸಿದ್ದರಾಮಯ್ಯ, ರಾಜೀನಾಮೆ ಬಳಿಕ ಅಲ್ಲಿಂದ ಹೊರಟರು.

ರಾಜೀನಾಮೆಗೂ ಮುನ್ನ ಡಿಸಿಎಂ ಡಿ. ಕೆ. ಶಿವಕುಮಾರ್ ಹಾಗೂ ತಮ್ಮ ಸಂಪುಟ ಸಹೋದ್ಯೋಗಿಗಳೊಂದಿಗೆ ಇಂದು ಬೆಳಗ್ಗೆ ಉಪಹಾರ ಸಭೆ ನಡೆಸಿದರು. ಸರ್ಕಾರಿ ನಿವಾಸ ಕಾವೇರಿಯಲ್ಲಿ ನಡೆದ ಈ ಸಭೆಯಲ್ಲಿ, ತಾವು ಸಿಎಂ ಹುದ್ದೆಯಿಂದ ಕೆಳಗಿಳಿಯುವುದಾಗಿ ಅವರು ಪ್ರಕಟಿಸಿದ್ದರು. ಇದಕ್ಕೂ ಮುನ್ನ ಮಂಗಳವಾರ ದೆಹಲಿಯಲ್ಲಿ ನಡೆದ ಹೈಕಮಾಂಡ್ ನೇತೃತ್ವದ ಸಭೆಯಲ್ಲಿ ಸಿದ್ದರಾಮಯ್ಯ ಅಧಿಕಾರ ಹಸ್ತಾಂತರಕ್ಕೆ ಸಮ್ಮತಿಸಿದ್ದರು.

ಮಾಧ್ಯಮಗೋಷ್ಟಿಯಲ್ಲಿ ಸಿದ್ದರಾಮಯ್ಯ ಹೇಳಿದ್ದಿಷ್ಟು: ಎಲ್ಲರಿಗೂ ನಮಸ್ಕಾರ. ನಾನು ಸಿಎಂ ಸ್ಥಾನಕ್ಕೆ ಲೋಕಭವನದಲ್ಲಿ ರಾಜೀನಾಮೆ ಸಲ್ಲಿಸಿದ್ದೇನೆ.



ರಾಜ್ಯಪಾಲರು ಊರಿನಲ್ಲಿ ಇಲ್ಲ. ರಾತ್ರಿ ಬರುತ್ತಾರಂತೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಹಾಗಾಗಿ ರಾಜೀನಾಮೆ ಪತ್ರವನ್ನು ಅವರ ಕಾರ್ಯದರ್ಶಿಗೆ ಕೊಟ್ಟಿದ್ದೇನೆ. ಅನೇಕ ಸಾರಿ ಹೇಳಿದ್ದೇನೆ. ಹೈಕಮಾಂಡ್ ಯಾವಾಗ ಸೂಚಿಸುತ್ತಾರೆ. ಆವಾಗ ನಾನು ರಾಜೀನಾಮೆ ಕೊಡುತ್ತೇನೆ ಅಂದಿದ್ದೆ. ಅದರ ಪ್ರಕಾರ ಮೊನ್ನೆ ಹೈಕಮಾಂಡ್ ರಾಜೀನಾಮೆ ಕೊಡಿ ಅಂತ ಹೇಳಿದ ಮೇಲೆ ರಾಜೀನಾಮೆ ಕೊಡುತ್ತೇನೆ ಅಂದಿದ್ದೆ. ಅದರಂತೆ ರಾಜೀನಾಮೆ ಸಲ್ಲಿಸಿದ್ದೇನೆ ಎಂದರು.

ರಾಜ್ಯಪಾಲರು ನನ್ನ ರಾಜೀನಾಮೆ ಪತ್ರವನ್ನು ಅವರು ಬಂದ ಬಳಿಕ ಅಂಗೀಕಾರ ಮಾಡುತ್ತಾರೆ ಅಂತ ವಿಶ್ವಾಸ ಇದೆ. ಸಂವಿಧಾನದ ಪ್ರಕಾರ ಅಂಗೀಕಾರ ಮಾಡಲೇಬೇಕು. ಸಿಎಂ ರಾಜೀನಾಮೆ ಹಾಗೂ ಮುಂದಿನ ಸಿಎಂಗೆ ಅವಕಾಶ ಮಾಡಿಕೊಡುವುದು ಅವರ ಜವಾಬ್ದಾರಿ. ನಮ್ಮ ಪಕ್ಷ 135+1 ಸ್ಥಾನಗಳನ್ನು ಪಡೆದಿದೆ. ಜೊತೆಗೆ ಪಕ್ಷೇತರರು ನಮ್ಮ ಸರ್ಕಾರಕ್ಕೆ ಬೆಂಬಲ ನೀಡಿದ್ದಾರೆ. ನಾವು ಸಂಪೂರ್ಣ ಬಹುಮತದಲ್ಲಿ ಇದ್ದೇವೆ. ಮುಂದಿನ ಸಿಎಂಗೆ ಅವಕಾಶ ಮಾಡಿಕೊಡುವುದು ಸಂವಿಧಾನಬದ್ಧವಾಗಿದೆ ಎಂಬ ಮಾತು ಹೇಳುತ್ತೇನೆ ಎಂದರು.

ಮೇರು ನಟ ರಾಜಕುಮಾರ್ ಅವರು ಅಭಿಮಾನಿಗಳನ್ನು ದೇವರು ಅಂತ ಕರೆಯುತ್ತಿದ್ದರು. ನಾನು ರಾಜಕಾರಣಿ ನಾನು ಸಂವಿಧಾನವನ್ನೇ ನನ್ನ ಧರ್ಮ ಅಂತ ತಿಳಿದುಕೊಂಡವನು. ಮತದಾರರೇ ನಮ್ಮ ಅಭಿಮಾನಿ ದೇವರು. ಕನ್ನಡ ನಾಡಿನ ಏಳು ಕೋಟಿ ಜನರ ಸೇವೆ ಮಾಡುವ ಅವಕಾಶ ಸಿಕ್ಕಿದೆ. ಎರಡು ಬಾರಿ ಸಿಎಂ ಆಗುವ ಅವಕಾಶ ಸಿಕ್ಕಿತ್ತು. ಎರಡು ಬಾರಿ ವಿಪಕ್ಷ ನಾಯಕ ಆಗುವ ಅವಕಾಶ ಸಿಕ್ಕಿತ್ತು. ಈ ಅವಕಾಶ ಕೊಟ್ಟ ಸೋನಿಯಾ ಗಾಂಧಿಗೆ, ರಾಹುಲ್ ಗಾಂಧಿಗೆ, ಮಲ್ಲಿಕಾರ್ಜುನ ಖರ್ಗೆಗೆ ಅಪಾರವಾದ ಧನ್ಯವಾದ ತಿಳಿಸುತ್ತೇನೆ ಎಂದು ಸಿದ್ದರಾಮಯ್ಯ ತಿಳಿಸಿದರು.

ನಾನು ಕಾಂಗ್ರೆಸ್ ಸೇರಿದ್ದು 2006ರಲ್ಲಿ. ಅಲ್ಲಿಂದ ಕಾಂಗ್ರೆಸ್ ಕಾರ್ಯಕರ್ತರು ಎಲ್ಲಾ ಕಾಂಗ್ರೆಸ್ ಮುಖಂಡರು, ಶಾಸಕರು, ಸಂಸದರು, ನನಗೆ ಪ್ರೀತಿ ತೋರಿಸಿದ್ದಾರೆ. ಅವರಿಗೆಲ್ಲರಿಗೂ ಧನ್ಯವಾದ ಹೇಳುತ್ತೇನೆ. ಎರಡು ಸಾರಿ ಸಿಎಂ ಆಗಿದ್ದಾಗ, ನನ್ನ ಜೊತೆ ಕೆಲಸ ಮಾಡಿದ್ದ ಸಹೋದ್ಯೋಗಿಗಳು ಎಲ್ಲಾ ರೀತಿಯ ಬೆಂಬಲ, ಸಹಕಾರ, ಪ್ರೀತಿಯನ್ನು ತೋರಿದ್ದಾರೆ. ಅವರಿಗೆ ಯಾವಗಲೂ ಚಿರ ಋಣಿಯಾಗಿರುತ್ತೇನೆ. ನಾನು ಹಳ್ಳಿಗಾಡಿನಿಂದ ಬಂದವನು. ನಾನು ಮುದೊಂದು ದಿನ ಶಾಸಕನಾಗಿ, ಮಂತ್ರಿಯಾಗ್ತೇನೆ, ಸಿಎಂ ಆಗ್ತೇನೆ ಎಂಬ ಕನಸು ಕಂಡಿರಲಿಲ್ಲ. ನಾನು ರಾಜಕಾರಣಕ್ಕೆ ಬಂದದ್ದು ಆಕಸ್ಮಿಕ. ನನ್ನ ಕುಟುಂಬದವರು ಯಾರೂ ರಾಜಕಾರಣದಲ್ಲಿ ಇರಲಿಲ್ಲ. ರಾಜಕಾರಣಕ್ಕೆ ಬಂದಾಗಿನಿಂದ ಬುದ್ದ, ಬಸವ, ಅಂಬೇಡ್ಕರ್, ಗಾಂಧೀಜಿ ತತ್ವಾದರ್ಶಗಳಲ್ಲಿ ನಂಬಿಕೆ ಇಟ್ಟವನು. ಸಂವಿಧಾನದಲ್ಲಿ ಅಪಾರವಾದ ನಂಬಿಕೆ ಇಟ್ಟವನು. ನಾವು

3ನೇ ಪುಟಕ್ಕೆ

ಹಟ್ಟಿ ಚಿನ್ನದ ಗಣಿ ಪಟ್ಟಣದಲ್ಲಿ ಸೌಹಾರ್ದಯುತ, ಶ್ರದ್ಧಾಭಕ್ತಿಯ ಬಕ್ರೀದ್ ಆಚರಣೆ

ಹಟ್ಟಿ ಚಿನ್ನದ ಗಣಿ:

ತ್ಯಾಗ, ಬಲಿದಾನ ಹಾಗೂ ಮಾನವೀಯತೆಯ ಸಂಕೇತವಾದ ಪವಿತ್ರ ಬಕ್ರೀದ್ (ಈದ್-ಉಲ್-ಅಝ್ಹಾ) ಹಬ್ಬವನ್ನು ಇಲ್ಲಿನ ಮುಸ್ಲಿಂ ಬಾಂಧವರು ಇಂದು ಅತ್ಯಂತ ಸೌಹಾರ್ದತೆ ಮತ್ತು ಶ್ರದ್ಧಾಭಕ್ತಿಯಿಂದ ಆಚರಿಸಿದರು.

ಭಾವೈಕ್ಯತೆಯ ನಮಾಜ್ ಮತ್ತು ವಿಶೇಷ ದುವಾ: ಗುರುವಾರ ಮುಂಜಾನೆ ಪಟ್ಟಣದ ಪ್ರಮುಖ ಈದ್ಗಾ ಮೈದಾನದಲ್ಲಿ ನೂರಾರು ಮುಸ್ಲಿಂ ಬಾಂಧವರು ಒಂದೆಡೆ ನೆರೆದು ಜಂಟಿಯಾಗಿ ವಿಶೇಷ ನಮಾಜ್ ಸಲ್ಲಿಸಿದರು.

ಈ ಸಂದರ್ಭದಲ್ಲಿ ಧರ್ಮ ಗುರುಗಳು ಬಕ್ರೀದ್ ಹಬ್ಬದ ಮಹತ್ವ, ತ್ಯಾಗದ ಹಿನ್ನೆಲೆ ಹಾಗೂ ಸಮಾಜದಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳುವ ಕುರಿತು ಪ್ರವಚನ ನೀಡಿದರು. ನಮಾಜ್‌ನ ಮುಕ್ತಾಯದ ವೇಳೆಯಲ್ಲಿ ದೇಶದಲ್ಲಿ



ಶಾಂತಿ, ಸಮೃದ್ಧಿ ನೆಲೆಸಲಿ ಮತ್ತು ಹಿಂದೂ, ಮುಸ್ಲಿಂ ಸೌಹಾರ್ದತೆ ಗಟ್ಟಿಯಾಗಲಿ ಎಂದು ವಿಶೇಷ ಪ್ರಾರ್ಥನೆ (ದುವಾ) ಮಾಡಲಾಯಿತು.

ಮುಗಿಲು ಮುಟ್ಟಿದ ಹಬ್ಬದ ಸಡಗರ: ನಮಾಜ್ ಪ್ರಕ್ರಿಯೆ ಮುಗಿಯುತ್ತಿದ್ದಂತೆ ಮುಸ್ಲಿಂ ಬಾಂಧವರು ಪರಸ್ಪರ ಆಲಿಂಗನ ಮಾಡಿಕೊಳ್ಳುವ ಮೂಲಕ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಹಬ್ಬದ ಅಂಗವಾಗಿ ಸಮಾಜದ ಬಡವರು ಮತ್ತು ನಿರ್ಗತಿಕರಿಗೆ ದಾನ-ಧರ್ಮಗಳನ್ನು (ಖುರ್ಬಾನಿ ಮಾಂಸ ಹಾಗೂ ಧಾನ್ಯ ವಿತರಣೆ) ಮಾಡುವ ಮೂಲಕ ಹಬ್ಬದ ಸಾರ್ಥಕತೆಯನ್ನು ಮೆರೆದರು.

ಹಿಂದು-ಮುಸ್ಲಿಂ ಬಾಂಧವ್ಯಕ್ಕೆ ಸಾಕ್ಷಿಯಾದ ಈದ್ಗಾ ಮೈದಾನಭಾವೈಕ್ಯತೆಯ ಸಂದೇಶ: ಈ ಬಾರಿಯ ಬಕ್ರೀದ್ ಆಚರಣೆಯು ಪಟ್ಟಣದ ಸೌಹಾರ್ದತೆಗೆ ಮತ್ತೊಮ್ಮೆ ಸಾಕ್ಷಿಯಾಯಿತು. ಸ್ಥಳೀಯ ಹಿಂದೂ ಬಾಂಧವರು ಹಾಗೂ ಪ್ರಮುಖ ಮುಖಂಡರು ಈದ್ಗಾ ಮೈದಾನಕ್ಕೆ ಖುದ್ದಾಗಿ ಭೇಟಿ ನೀಡಿ,ಮುಸ್ಲಿಂ ಸಹೋದರರರನ್ನು ಆಲಂಗಿಸಿ ಹಬ್ಬದ ಶುಭ ಕೋರಿದರು.

ಈ ಮೂಲಕ ಹಟ್ಟಿ ಪಟ್ಟಣದಲ್ಲಿ ನಾವೆಲ್ಲರೂ ಒಂದೇ ಎಂಬ ಭಾವೈಕ್ಯತೆಯ ಸಂದೇಶ ರವಾನೆಯಾಯಿತು.ಬಿಗಿ ಪೊಲೀಸ್ ಬಂದೋಬಸ್ತ್‌ಹಬ್ಬದ ಆಚರಣೆಯ ಸಂದರ್ಭ ದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮವಾಗಿ ಹಟ್ಟಿ ಪೊಲೀಸ್ ಠಾಣೆಯ ವತಿಯಿಂದ ಈದ್ಗಾ ಮೈದಾನ ಹಾಗೂ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು.

ಶಾಂತಿಯುತವಾಗಿ ಹಬ್ಬ ಆಚರಿಸಲು ಪೊಲೀಸರು ಸೂಕ್ತ ಸಹಕಾರ ನೀಡಿದರು. ಒಟ್ಟಾರೆಯಾಗಿ ಹಟ್ಟಿ ಚಿನ್ನದ ಗಣಿ ಪಟ್ಟಣದಲ್ಲಿ ಬಕ್ರೀದ್ ಹಬ್ಬವು ಸಡಗರ- ಸಂಭ್ರಮ ಹಾಗೂ ಶಾಂತಿಯುತ ವಾಗಿ ಸಂಭ್ರಮಿಸಲಾಯಿತು.

ದಲಿತ ಮುಖ್ಯಮಂತ್ರಿ ಆಗ್ರಹಿಸಿ ಛಲವಾದಿ ಮಹಾಸಭಾದ ಪ್ರತಿಭಟನೆ
ಡಾ.ಜಿ.ಪರಮೇಶ್ವರ್ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡುವಂತೆ ಒತ್ತಾಯ

ರಾಯಚೂರು, ಮೇ.28:

ರಾಜ್ಯದ ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಗೃಹ ಸಚಿವರಾದ ಡಾ. ಜಿ. ಪರಮೇಶ್ವರ್ ಅವರನ್ನು ರಾಜ್ಯದ ಮುಖ್ಯಮಂತ್ರಿಯನ್ನಾಗಿ ನೇಮಿಸಬೇಕೆಂದು ಆಗ್ರಹಿಸಿ ಛಲವಾದಿ ಮಹಾಸಭಾ ಜಿಲ್ಲಾ ಸಮಿತಿ ವತಿಯಿಂದ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಬುಧವಾರ ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಮಾತನಾಡಿದ ಜಿಲ್ಲಾ ಅಧ್ಯಕ್ಷ ವಿಶ್ವನಾಥ ಪಟ್ಟಿ ಅವರು, ಕರ್ನಾಟಕ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಪ್ರಥಮ ದಲಿತ ಉಪಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿರುವ ಡಾ. ಜಿ. ಪರಮೇಶ್ವರ್ ಅವರು ಪಕ್ಷದ ನಿಷ್ಠಾವಂತ ಹಾಗೂ ಅನುಭವಿ ನಾಯಕರಾಗಿದ್ದಾರೆ ಎಂದು ಹೇಳಿದರು.

ಅವರು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ರಾಜ್ಯಾಧ್ಯಕ್ಷರಾಗಿ ದೀರ್ಘಕಾಲ ಸೇವೆ ಸಲ್ಲಿಸಿದ್ದು, ವಿಜ್ಞಾನ ಮತ್ತು ತಂತ್ರಜ್ಞಾನ, ಉನ್ನತ ಶಿಕ್ಷಣ, ವೈದ್ಯಕೀಯ ಶಿಕ್ಷಣ ಸೇರಿದಂತೆ ಹಲವು ಮಹತ್ವದ ಖಾತೆಗಳನ್ನು ಯಶಸ್ವಿಯಾಗಿ ನಿರ್ವಹಿಸಿದ್ದಾರೆ. ಜೊತೆಗೆ ವಿಧಾನ ಪರಿಷತ್ ಸಭಾ ನಾಯಕರಾಗಿಯೂ ರಾಜ್ಯಕ್ಕೆ ಸೇವೆ ಸಲ್ಲಿಸಿದ್ದಾರೆ ಎಂದು ತಿಳಿಸಿದರು.

2013ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ 122 ಸ್ಥಾನಗಳ ಭರ್ಜರಿ ಗೆಲುವು ತಂದುಕೊಟ್ಟ ಕೀರ್ತಿ ಡಾ. ಜಿ. ಪರಮೇಶ್ವರ್ ಅವರಿಗೆ ಸಲ್ಲುತ್ತದೆ. 2023ರ ಚುನಾವಣೆಯಲ್ಲಿಯೂ ದಲಿತ ಸಮುದಾಯದ ಮತಗಳ



ಬೆಂಬಲದಿಂದ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದ್ದು, ಇದೀಗ ದಲಿತ ಸಮುದಾಯಕ್ಕೆ ಮುಖ್ಯಮಂತ್ರಿ ಸ್ಥಾನ ನೀಡುವ ಮೂಲಕ ಕಾಂಗ್ರೆಸ್ ತನ್ನ ಋಣ ತೀರಿಸಬೇಕಾಗಿದೆ ಎಂದು ಒತ್ತಾಯಿಸಿದರು.

ಪಕ್ಷದ ಶಿಸ್ತು, ಸಿದ್ಧಾಂತ ಹಾಗೂ ಸಂಘಟನೆಯಲ್ಲಿ ದೀರ್ಘಕಾಲ ತೊಡಗಿಸಿಕೊಂಡಿರುವ ಡಾ. ಜಿ. ಪರಮೇಶ್ವರ್ ಅವರನ್ನು ರಾಜ್ಯದ ಪ್ರಥಮ ದಲಿತ ಮುಖ್ಯಮಂತ್ರಿಯನ್ನಾಗಿ ನೇಮಿಸುವ ಮೂಲಕ ಕಾಂಗ್ರೆಸ್ ಪಕ್ಷ ಇತಿಹಾಸ ನಿರ್ಮಿಸಲಿ ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಎಂ. ವಸಂತ್ ರಾಜ್ಯ ನಿರ್ದೇಶಕರು, ಬಿ.ಎ. ದೊಡ್ಡಮನಿ ಗೌರವಾಧ್ಯಕ್ಷರು, ತಮ್ಮಣ್ಣ ಬೊಮ್ಮನಾಳ ಪ್ರಧಾನ

3ನೇ ಪುಟಕ್ಕೆ

ಗ್ರಾಮೀಣ ಭಾಗದ ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ಅಗತ್ಯ - ವೆಂಕಟೇಶ ದೊರೆ

ಸಿರವಾರ :

ಮಕ್ಕಳಿಗೆ ಶಿಕ್ಷಣ ಹಾಗೂ ಸಂಸ್ಕಾರ ನೀಡುವುದರಿಂದ ಉತ್ತಮ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ. ಹೀಗಾಗಿ ಗ್ರಾಮೀಣ ಭಾಗದ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹ ಅಗತ್ಯ ಎಂದು ಕಾಂಗ್ರೆಸ್ ಮುಖಂಡ ಹಾಗೂ ಅ,ಕ,ವಾ,ನಾಯಕ ಮಹಾಸಭಾದ ನಗರ ಘಟಕ ಅಧ್ಯಕ್ಷ ವೆಂಕಟೇಶ ದೊರೆ ಅಭಿಪ್ರಾಯಪಟ್ಟರು.

ಪಟ್ಟಣದ ವೈಎಜಿ ಕಾಲೋನಿಯ ಕೆಎಸ್ ಬಿ ಚಾಲೆಂಜ್ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕೇಂದ್ರದಲ್ಲಿ ನಡೆದ ಬೀಳ್ಕೊಡುಗೆ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು. 5 ನೇ ತರಗತಿಯಲ್ಲಿ ವಿವಿಧ ವಸತಿ ಶಾಲೆಗಳ ಸ್ಪರ್ಧಾತ್ಮಕ ಪರೀಕ್ಷೆಗಳನ್ನು



ಬರೆಯುವ ಮಕ್ಕಳಿಗೆ ಉತ್ತಮವಾದ ತರಬೇತಿ ಅಗತ್ಯವಾಗಿದೆ. ಅಂತಹ ತರಬೇತಿಯನ್ನು ನೀಡುತ್ತಾ ಉತ್ತಮ ಫಲಿತಾಂಶ ನೀಡುತ್ತಿರುವ ಕೆಎಸ್ ಬಿ ಕೋಚಿಂಗ್ ಸೆಂಟರ್ ಕಾರ್ಯ ಮೆಚ್ಚುವಂತದು ಎಂದರು.

ಬಳಿಕ ಪತ್ರಕರ್ತ ಅಪ್ಪಾಜಿ ನಾಯಕ ಮಾತನಾಡಿ, ಮಕ್ಕಳಿಗೆ ಜ್ಞಾನದ ಜೊತೆಗೆ ಕೌಶಲ್ಯಭರಿತ ಶಿಕ್ಷಣ ನೀಡಬೇಕಾಗಿದೆ. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಗುಣಮಟ್ಟದ ತರಬೇತಿ ಇದ್ದಲ್ಲಿ ಪರಿಮಾಣಾತ್ಮಕ ಕಲಿಕೆ ಸಾಧ್ಯವಾಗುತ್ತದೆ ಎಂದರು. ಇದೇ ವೇಳೆ ಅಮರೇಗೌಡ ಬಯ್ಯಾಪೂರ ಕಾಲೇಜಿನ ಉಪನ್ಯಾಸಕರಾದ ದುರುಗಪ್ಪ ಅವರು ಮಾತನಾಡುತ್ತಾ, ಕಳೆದ ಎರಡು ವರ್ಷದಿಂದ ಮಕ್ಕಳಿಗೆ ತರಬೇತಿ ನೀಡುತ್ತಾ ನವೋದಯ, ಸೈನಿಕ ಶಾಲೆ, ಕಿತ್ತೂರು ರಾಣಿ ಚೆನ್ನಮ್ಮ, ಆಳ್ವಾಸ ಸಂಸ್ಥೆ, ಮೊರಾರ್ಜಿ ದೇಸಾಯಿ ಶಾಲೆ, ಏಕಲವ್ಯ ವಸತಿ ಶಾಲೆ, ಆದರ್ಶ ಶಾಲೆಗಳು ಸೇರಿದಂತೆ ವಿವಿಧ ವಸತಿ ಶಾಲೆಗಳಿಗೆ ಮಕ್ಕಳು ಆಯ್ಕೆಯಾಗುವಲ್ಲಿ ಮಹತ್ವದ ಪಾತ್ರ ವಹಿಸಿದೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ವಿವಿಧ

3ನೇ ಪುಟಕ್ಕೆ



ಸಡಗರ ಸಂಭ್ರಮದಿಂದ ಬಕ್ರೀದ್ ಹಬ್ಬ ಆಚರಣೆ

ಕವಿತಾಳ,ಮೇ.28-

ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಮುಸ್ಲಿಂ ಬಾಂಧವರು ಗುರುವಾರ ಪವಿತ್ರ ಬಕ್ರೀದ್ ಹಬ್ಬವನ್ನು ಅತ್ಯಂತ ಸಡಗರ, ಸಂಭ್ರಮದಿಂದ ಆಚರಿಸಿದರು.

ಇಲ್ಲಿನ ಈದ್ಗಾ ಮೈದಾನದಲ್ಲಿ ಬೆಳಿಗ್ಗೆಯೇ ಹೊಸ ಬಟ್ಟೆಗಳನ್ನು ಧರಿಸಿ ನೂರಾರು ಮುಸ್ಲಿಂ ಬಾಂಧವರು ಸಾಮೂಹಿಕ ನಮಾಜ್ ಸಲ್ಲಿಸಿದರು. ಖಾಜಿ ಸೈಯದ್ ಶಂಸುದ್ದಿನ್ ಅವರು ಪವಿತ್ರ ಕುರಾನ್ ಪಠಣ ಮಾಡಿದರು. ಹಾಫಿಜ್ ಮುಜಾಹಿದ್ ಅವರು ನಮಾಜ್ ಬೋಧಿಸಿದರು.

ಪ್ರಾರ್ಥನೆ ಮುಗಿದ ತಕ್ಷಣವೇ ಹಿರಿಯರು, ಯುವಕರು ಮತ್ತು ಮಕ್ಕಳು ಪರಸ್ಪರ ತಪ್ಪಿಕೊಂಡು ಈದ್ ಮುಬಾರಕ್ ಎಂದು ವಿನಿಮಯ ಮಾಡಿಕೊಂಡರು. ಈ ಸಂದರ್ಭದಲ್ಲಿ ಹಿರಿಯ ಮುಖಂಡರು, ವೃದ್ಧರು ಮತ್ತು ಯುವಕರು ಹಾಗೂ ಮಕ್ಕಳು ಪ್ರಾರ್ಥನೆಯಲ್ಲಿ ಭಾಗವಹಿಸಿದ್ದರು.



ಚುಕ್ಕಿ ಸೂಗಪ್ಪ ಸಾಹುಕಾರ ನೇತೃತ್ವದಲ್ಲಿ ಮುಸ್ಲಿಂರಿಗೆ ಶುಭಾಷಯ ವಿನಿಮಯ

ಸಿರವಾರ.ಮೆ.28-

ಪಟ್ಟಣದ ಈದ್ಗಾ ಮೈದಾನದಲ್ಲಿ ಭಕ್ತಿ ಹಾಗೂ ಸಡಗರದಿಂದ ಆಚರಿಸಿದ ಮುಸ್ಲಿಂ ಬಾಂಧವರ ಬಕ್ರೀದ್ ಹಬ್ಬವು ತ್ಯಾಗ, ಬಲಿದಾನದ ಸಂಕೇತವಾದ ಈ ಪವಿತ್ರ ಹಬ್ಬವು ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಹೋದರತ್ವವು ನೆಲೆಗೊಳ್ಳಲು ಪ್ರೇರಣೆಯಾಗಲಿ ಎಂದು ಹಾರೈಸುತ ಮುಸ್ಲಿಂ ಬಾಂಧ

3ನೇ ಪುಟಕ್ಕೆ

ತ್ಯಾಗ ಬಲಿದಾನದ ಪ್ರತೀಕವಾದ ಬಕ್ರೀದ್ ಹಬ್ಬ ಆಚರಣೆ

ಸಿರವಾರ.ಮೇ28-

ತ್ಯಾಗ, ಬಲಿದಾನಗಳ ಸಂಕೇತವಾದ ಬಕ್ರೀದ್ ಹಬ್ಬವನ್ನು ತಾಲೂಕಿನಾದ್ಯಂತ ಮುಸ್ಲಿಂ ಭಾಂದವರು ಶ್ರದ್ದೆ ಭಕ್ತಿಯಿಂದ ಆಚರಿಸಿದರು.

ಪಟ್ಟಣದ ನೂರಾನಿ ಮುಸ್ಜಿದಿಯಿಂದ ಮೆರವಣಿಗೆ ಮೂಲಕ ಮರಾಠ ರಸ್ತೆಯಲ್ಲಿರುವ ಈದ್ಗಾ ಮೈದಾನಕ್ಕೆ ತೆರಳಿದರು. ನಂತರ ಅಪಾರ ಸಂಖ್ಯೆಯಲ್ಲಿ ನೆರೆದಿದ್ದ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಧರ್ಮ ಗುರುಗಳಾದ ಮಂಜೂರುಸಾಬ ಖಾಜಿ, ನವಾಜ್



ಖಾಜಿ ಅವರು ನಮಾಜ್ ಮಾಡಿಸಿ ಹಬ್ಬದ ಸಂದೇಶ ಸಾರಿ, ಬಕ್ರೀದ್ ಹಬ್ಬದ ಆಚರಣೆ ಹಾಗೂ ದಾನ-ಧರ್ಮದ ಮಹತ್ವ ಕುರಿತು ಬೋಧನೆ ಮಾಡಿದರು. ಸಮಾಜದಲ್ಲಿ ಎಲ್ಲರೊಂದಿಗೂ ಸಹೋದರರಂತೆ ಬಾಳುವಂತೆ ಕರೆ ನೀಡಿದರು. ಪ್ರಾರ್ಥನೆಯ ಬಳಿಕ ಮುಸ್ಲಿಂ ಭಾಂದವರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು.

ಪ.ಪಂ ಚಾ ಯತಿ ಅದ್ಯಕ್ಷ ಹಾಜಿ ಚೌದ್ರಿ, ಸದಸ್ಯರಾದ ಹಸೇನ ಅಲಿ ಸಾಬ್, ಮೌಲಾಸಾಬ ವರ್ಚಸ್, ಮಾಜಿ ಸದಸ್ಯರಾದ ಇರ್ಫಾನ್ ಬಢಾಫುರ್ ಇಮಾಮ್, ಮುಖಂಡರಾದ ಮಹ್ಮದ್ ಹುಸೇನ್, ಮಮಿ, ಶಾಬೂದ್ದಿನ್, ಸತ್ತರಸಾಬ್, ಪಕ್ರುದ್ದಿನ್, ವಿಎಸ್ ಎಸ್ ಎನ್ ಉಪಾದ್ಯಕ್ಷ ನಾಗರಾಜಗೌಡ, ಈದ್ಗಾ ಮೈದಾನಕ್ಕೆ ಆಗಮಿಸಿ ಶುಭಾಷಯ ತಿಳಿಸಿದರು. ಸಿಪಿಐ ಶಶಿಕಾಂತ ಎಂ, ಪಿಎಸ್ ಐ ಚಂದ್ರಶೇಖರ ಹಿರೇಮಠ ನೇತೃತ್ಬ ದಲ್ಲಿ ಬಂದೋಬಸ್ತ್ ಒದಗಿಸಲಾಗಿತ್ತು.

ಎಐ ಎನ್ನುವುದು ಕೇವಲ ತಂತ್ರಜ್ಞಾನದ ಚರ್ಚೆಯಲ್ಲ; ಇದು ಮೂಲಭೂತವಾಗಿ ನಂಬಿಕೆ, ಜವಾಬ್ದಾರಿ, ಪಾರದರ್ಶಕತೆ ಮತ್ತು ನಾಗರಿಕರ ಮೇಲಿನ ಪ್ರಭಾವ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್

ಬಳ್ಳಾರಿ,ಮೇ 28-

ಟಎಐ ಎನ್ನುವುದು ಕೇವಲ ತಂತ್ರಜ್ಞಾನದ ಚರ್ಚೆಯಲ್ಲ; ಇದು ಮೂಲಭೂತವಾಗಿ ನಂಬಿಕೆ, ಜವಾಬ್ದಾರಿ, ಪಾರದರ್ಶಕತೆ ಮತ್ತು ನಾಗರಿಕರ ಮೇಲಿನ ಪ್ರಭಾವದ ಕುರಿತಾಗಿದೆಟ ತಂತ್ರಜ್ಞಾನವು ಸಾರ್ವಜನಿಕ ಸೇವೆ ವಿತರಣೆ, ಆಡಳಿತಾತ್ಮಕ ಪ್ರತಿಕ್ರಿಯೆ ಮತ್ತು ಒಳಗೊಳ್ಳುವಿಕೆಯನ್ನು ಸುಧಾರಿಸುವ ಮೂಲಕ ಕರ್ನಾಟಕವನ್ನು ಎಐ ತಂತ್ರಜ್ಞಾನದ ಹಬ್ ಮಾತ್ರವಲ್ಲದೆ, ಎಐಸಕ್ರಿಯ ಆಡಳಿತ ರಾಜ್ಯವನ್ನಾಗಿ ಮಾಡುವುದು ಸರ್ಕಾರದ ದೂರದೃಷ್ಟಿಯಾಗಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು ಹೇಳಿದರು.

ಕರ್ನಾಟಕ ಸರ್ಕಾರದ ಇಆಡಳಿತ ಕೇಂದ್ರದಿಅದ ವತಿಯಿಂದ ದಿ ಲಲಿತ್ ಅಶೋಕ್ ಹೋಟೆಲ್?ನಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಸೆಂಟರ್ ಆಫ್ ಎಕ್ಸಲೆನ್ಸ್ ಅನುಷ್ಠಾನ ಕಾರ್ಯಾಗಾರಟ ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆಡಳಿತದಲ್ಲಿ ಸ್ಕೇಲೆಬಲ್, ಸುರಕ್ಷಿತ ಮತ್ತು ನಾಗರಿಕಕೇಂದ್ರಿತ ಎಐ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಕುರಿತು ಚರ್ಚಿಸಲು ವಿವಿಧ ರಾಜ್ಯಗಳ ಹಿರಿಯ ಸರ್ಕಾರಿ ಅಧಿಕಾರಿಗಳು, ನೀತಿ ನಿರೂಪಕರು, ಉದ್ಯಮದ ಮುಖಂಡರು, ಶಿಕ್ಷಣ ತಜ್ಞರು, ನವೋದ್ಯಮಗಳು ಮತ್ತು ಪರಿಸರ ವ್ಯವಸ್ಥೆಯ ಪಾಲುದಾರರು ಈ ಕಾರ್ಯಾಗಾರದಲ್ಲಿ ಒಟ್ಟಾಗಿ ಭಾಗವಹಿಸಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ತಿಳಿಸುತ್ತಾ, ಎಐ ತಂತ್ರಜ್ಞಾನದ ಬಗ್ಗೆ ಮಾಹಿತಿ ನೀಡಿದರು.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ (ಇಆಡಳಿತ) ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ ಅವರು ಮಾತನಾಡಿ, ಇಆಡಳಿತ ಪರಿಸರ ವ್ಯವಸ್ಥೆಯ ನಾಲ್ಕು ವಿಭಾಗಗಳಾದ ಇಆಡಳಿತ ಕೇಂದ್ರ, ಸ್ಮಾರ್ಟ್ ಗವರ್ನೆನ್ಸ್ ಕೇಂದ್ರ, ಕರ್ನಾಟಕ ರಾಜ್ಯ ರಿಮೋಟ್ ಸೆನ್ಸಿಂಗ್ ಅಪ್ಲಿಕೇಶನ್



ಕೇಂದ್ರ, ಮತ್ತು ನಾಗರಿಕ ಸೇವೆಗಳ ಎಲೆಕ್ಟ್ರಾನಿಕ್ ವಿತರಣೆ ನಿರ್ದೇಶನಾಲಯಗಳ ಜಂಟಿ ಪಾತ್ರವನ್ನು ಶ್ಲಾಘಿಸಿದರು.

ಮರುಬಳಕೆ ಮಾಡಬಹುದಾದ ಎಐ ಸೇವೆಗಳು ಮತ್ತು ಬಹುಭಾಷಾ ಇಂಟರ್?ಫೇಸ್?ಗಳನ್ನು ಬೆಂಬಲಿಸಲು ಟಕರ್ನಾಟಕ ಎಐ ಸ್ಟಾಕ್' ಅನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದ ಅವರು, ಟಸಾರಾಂಶ', ಟಕರ್ತವ್ಯ', ಟನಿರಂತರ' ಮತ್ತು ಎಐ ಆಧಾರಿತ ಕುಂದುಕೊರತೆ ನಿರ್ವಹಣಾ ವ್ಯವಸ್ಥೆಗಳನ್ನು ಉಲ್ಲೇಖಿಸಿ, ಕರ್ನಾಟಕದ ಶಕ್ತಿಯು ಕೇವಲ ತಂತ್ರಜ್ಞಾನ ಸೃಷ್ಟಿಯಲ್ಲಷ್ಟೇ ಇಲ್ಲ, ಅದನ್ನು ಜನಸಾಮಾನ್ಯರ ಒಳಿತಿಗಾಗಿ ಅನ್ವಯಿಸುವುದರಲ್ಲಿದೆ ಎಂದರು.

ಎಲೆಕ್ಟ್ರಾನಿಕ್ಸ್ , ಐಟಿ, ಬಿಟಿ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಇಲಾಖೆಯ ಕಾರ್ಯದರ್ಶಿ ಡಾ.ಎನ್. ಮಂಜುಳಾ ಅವರು ಮಾತನಾಡಿ, ಕರ್ನಾಟಕದಲ್ಲಿ ವಿವಿಧ ಉದಯೋನ್ಮುಖ ತಂತ್ರಜ್ಞಾನ ಕ್ಷೇತ್ರಗಳಲ್ಲಿ 20 ಕ್ಕೂ ಹೆಚ್ಚು ಟಸೆಂಟರ್ ಆಫ್ ಎಕ್ಸಲೆನ್ಸ್ ' ಕಾರ್ಯನಿರ್ವಹಿಸುತ್ತಿದ್ದು, ಅವುಗಳಲ್ಲಿ ಮೂರು ಎಐ ಗೆ ಮೀಸಲಾಗಿವೆ ಎಂದು ತಿಳಿಸಿದರು.

ಐಐಟಿ ಧಾರವಾಡದಲ್ಲಿ ಮುಂಬರುವ ಕ್ವಾಂಟಮ್ ಮತ್ತು ಎಐ ಸೆಂಟರ್ ಆಫ್ ಎಕ್ಸಲೆನ್ಸ್ , ಐಐಟಿ ಅಲುಮ್ನಿ ಸೆಂಟರ್ ಹಾಗೂ ಜೈವಿಕ ತಂತ್ರಜ್ಞಾನ ಕೇಂದ್ರಗಳ ಸಹಯೋಗದ ಕುರಿತು ಅವರು ಮಾಹಿತಿ ನೀಡಿದರು. ಅಲ್ಲದೆ, ತಂತ್ರಜ್ಞಾನ ವಲಯದಲ್ಲಿ ಕೌಶಲ್ಯವನ್ನು ಬಲಪಡಿಸಲು ಟನಿಪುಣ ಕರ್ನಾಟಕಟ ಉಪಕ್ರಮದ ಪ್ರಾಮುಖ್ಯತೆಯನ್ನು ಅವರು ಒತ್ತಿ ಹೇಳಿದರು.

ಇಆಡಳಿತ ಕೇಂದ್ರದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಟಿ.ಭೂಬಾಲನ್ ಅವರು ಗಣ್ಯರನ್ನು, ಇಂಡಿಯಾ ಎಐ ಮಿಷನ್?ನ ಪ್ರತಿನಿಧಿಗಳನ್ನು ಮತ್ತು ಭಾಗವಹಿಸಿದ್ದ ರಾಜ್ಯ ಸರ್ಕಾರಗಳ ಪ್ರತಿನಿಧಿಗಳನ್ನು ಸ್ವಾಗತಿಸುತ್ತಾ, ಈ ಕಾರ್ಯಾಗಾರವು ಸಾರ್ವಜನಿಕ ಆಡಳಿತ ಮತ್ತು ನಾಗರಿಕ ಕೇಂದ್ರಿತ ಆಡಳಿತಕ್ಕಾಗಿ ಭವಿಷ್ಯದ ಸನ್ನದ್ಧ ಎಐ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ನಿಟ್ಟಿನಲ್ಲಿ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ಅವರು ಆಶಯ ವ್ಯಕ್ತಪಡಿಸಿದರು. ಈ ಕಾರ್ಯಾಗಾರದಲ್ಲಿ ಆಂಧ್ರಪ್ರದೇಶ, ಕೇರಳ ಮತ್ತು ಮಹಾರಾಷ್ಟ್ರ ರಾಜ್ಯಗಳ ಪ್ರತಿನಿಧಿಗಳು ಹಾಗೂ ಇಂಡಿಯಾ ಎಐ ಮಿಷನ್?ನ ಅಧಿಕಾರಿಗಳು ಭಾಗವಹಿಸಿ, ಎಐ ಅಳವಡಿಕೆ ಮತ್ತು ಆಡಳಿತದಲ್ಲಿನ ನಾವೀನ್ಯತೆಗಳ ಕುರಿತು ತಮ್ಮ ರಾಜ್ಯಗಳ ದೂರದೃಷ್ಟಿ ಮತ್ತು ಕಾರ್ಯತಂತ್ರಗಳನ್ನು ಹಂಚಿಕೊಂಡರು. ಕಾರ್ಯಾಗಾರದ ಭಾಗವಾಗಿ ನಡೆದ ಸಂವಾದಾತ್ಮಕ ಬ್ರೇಕ್?ಔಟ್ ಸೆಷನ್?ಗಳಲ್ಲಿ ಭಾಗವಹಿಸಿದ ರಾಜ್ಯಗಳು ಮತ್ತು ಇಂಡಿಯಾ ಎಐ ತಂಡಗಳು ಜಂಟಿಯಾಗಿ ಟಸೆಂಟರ್ ಆಫ್ ಎಕ್ಸಲೆನ್ಸ್ ' ನ ದೂರದೃಷ್ಟಿ, ಕಾರ್ಯತಂತ್ರದ ಸ್ತಂಭಗಳು, ಸಹಭಾಗಿತ್ವ ಮತ್ತು ಅನುಷ್ಠಾನದ ಮಾರ್ಗಸೂಚಿಗಳ ಕುರಿತು ಸುದೀರ್ಘ ಚರ್ಚೆ ನಡೆಸಿದವು. ಸಾರ್ವಜನಿಕ ಆಡಳಿತದಲ್ಲಿ ಜವಾಬ್ದಾರಿಯುತ ಎಐ ಅಳವಡಿಕೆಯನ್ನು ವೇಗಗೊಳಿಸಲು ಪ್ರಾಯೋಗಿಕ ಎಐ ಆಡಳಿತದ ಉಪಕ್ರಮಗಳನ್ನು ಪ್ರದರ್ಶಿಸುವ ಮೂಲಕ ಕಾರ್ಯಕ್ರಮವು ಯಶಸ್ವಿಯಾಗಿ ಮುಕ್ತಾಯಗೊಂಡಿತು.



ಸಿಡಿಲು ಬಡಿದು ಬಣವೆಗೆ ಬೆಂಕಿ

ಚಿತ್ತಾಪುರ,ಮೇ.28-

ತಾಲೂಕಿನ ಕರದಾಳ ಗ್ರಾಮದಲ್ಲಿ ಬುಧವಾರ ಬೆಳ್ಳಂಬೆಳಗ್ಗೆ ಸುರಿದ ಗುಡುಗು ಸಹಿತ ಭಾರೀ ಗಾಳಿ ಮಳೆಯ ನಡುವೆ ಕಣಕಿ ಬಣವೆಗೆ ಸಿಡಿಲು ಬಡಿದು ಸಂಪೂರ್ಣವಾಗಿ ಬೆಂಕಿಗಾಹುತಿಯಾದ ಘಟನೆ ನಡೆದಿದೆ.

ಗ್ರಾಮದ ಸಿದ್ದಣ್ಣ ಶರಣಪ್ಪ ಕೊಟ್ರಕಿ ಅವರ ಜಮೀನಿನಲ್ಲಿ ಸಂಗ್ರಹಿಸಿಟ್ಟಿದ್ದ ಕಣಕಿ ಬಣವೆಗೆ ಬೆಳಗ್ಗೆ ಸುಮಾರು 4 ಗಂಟೆ ಸುಮಾರಿಗೆ ಸಿಡಿಲು ಬಡಿದ ಪರಿಣಾಮ ಬೆಂಕಿ ಹೊತ್ತಿಕೊಂಡಿದೆ.

ಮಳೆಯ ನಡುವೆಯೂ ಕಣಕಿ ಬಣವಿ ಭಾರೀ ಪ್ರಮಾಣದಲ್ಲಿ ಹೊತ್ತಿ ಉರಿದಿದ್ದು, ಗಾಳಿಯ ರಭಸಕ್ಕೆ ಬೆಂಕಿಯ ಕಿಡಿಗಳು ಹಾರಿ ಮಿಂಚು ಹುಳುವಿನಂತೆ ಹೊಳೆಯುತ್ತಿರುವ ದೃಶ್ಯವನ್ನು ಸ್ಥಳೀಯರು ಮೊಬೈಲ್?ನಲ್ಲಿ ಸೆರೆಹಿಡಿದಿದ್ದಾರೆ.

ಕೆಲವು ದಿನಗಳ ಹಿಂದೆ ಹೊಲದಲ್ಲಿದ್ದ ಜೋಳದ ರಾಶಿಯನ್ನು ಕಟ್ಟಿ ಕಣಕಿ ಬಣವಿಯಾಗಿ ಸಂಗ್ರಹಿಸಲಾಗಿತ್ತು. ಸಿಡಿಲಿನ ಪರಿಣಾಮ ಸಂಪೂರ್ಣ ಬಣವಿ ಸುಟ್ಟುಹೋಗಿದೆ.

ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ತಿಳಿದು ಬಂದಿದೆ.



ನೀರುದ್ಯೋಗಿ ವಿಕಲಚೇತನರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ಸಹಕಾರ ಮತ್ತು ಪೂರಕ ತರಬೇತಿ

ಕಲಬುರಗಿ,ಮೇ.28-

ಕಲಬುರಗಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವುಗಳ ಸಹಯೋಗದೊಂದಿಗೆ ನೀರುದ್ಯೋಗಿ ವಿಕಲಚೇತನರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ಸಹಕಾರ ಮತ್ತು ಪೂರಕ ತರಬೇತಿ ಕುರಿತು ಕಲಬುರಗಿ ತಾಲೂಕಿನ ಗ್ರಾಮೀಣ, ನಗರ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕತರ್ರಿಗೆ ಕಲಬುರಗಿ ತಾಲೂಕು ಪಂಚಾಯತಿ ಕಚೇರಿಯಲ್ಲಿ ಮಂಗಳವಾರ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು.

ಈ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಕಲಬುರಗಿ ತಾಲೂಕು ಪಂಚಾಯಿತಿ ಕಾರ್ಯನಿರ್ವಹಕ ಅಧಿಕಾರಿ ಎಸ್.ಡಿ. ಸೈಯದ್ ಪಟೇಲ ಅವರು, ಸೇಲ್ಕೋ ಫೌಂಡೇ ಶನ್‌ರವರು ವಿಕಲಚೇತನರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಸಮಾಜದ ಮುಖ್ಯವಾಹಿನಿಗೆ ತರಲು ಹಾಗೂ ಸ್ವಾವಲಂಭಿಗಳಾಗಿ ಬದುಕಲು ಆರ್ಥಿಕ ಸಹಕಾರ ನೀಡುತ್ತಿದ್ದಾರೆ ಎಂದು ತಿಳಿಸಿದರು.

ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸಾಧಿಕ್ ಹುಸೇನ್ ಖಾನ್ ಅವರು ಮಾತನಾಡಿ, ಗ್ರಾಮೀಣ ಪ್ರದೇಶದ ವಿಕಲಚೇ ತನರನ್ನು ಗುರು ತಿಸಿ ಅವರಿಗೆ ಸ್ವಯಂ ಉದ್ಯೋಗ ತರಬೇತಿ ನೀಡಲು ಅವಕಾಶ ಒದಗಿಸಬೇಕು. ಸರ್ಕಾರದ ಯೋಜನೆಗಳ ಕುರಿತು ಅವರಿಗೆ ಮಾಹಿತಿ ನೀಡಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಬೆಂಗಳೂರಿನ ಸೇಲ್ಕೋ ಫೌಂಡೇಶನ್ ಹಿರಿಯ ವ್ಯವಸ್ಥಾಪಕರಾದ ಫಣೀ ಂದ್ರ ಸಿಂಗ್ ಅವರು ಮಾತನಾಡಿ ದರು.

ನಂತರದಲ್ಲಿ ಸೇಲ್ಕೋ ವಲಯ ವ್ಯವಸ್ಥಾಪಕ ಯಲ್ಲಾಲಿಂಗ ದೊಡ್ಡಮನಿ ಅವರು ಸೌರಶಕ್ತಿ ಆಧಾರಿತ ಉದ್ಯೋಗವನ್ನು ಪ್ರಾರಂಭಿಸಲು ಬೇಕಾದ ಮಾಹಿತಿ ನೀಡಿದರು. ವಿಕಲಚೇತನರು ಸ್ವಂತ ಉದ್ಯೋಗವನ್ನು ಪ್ರಾರಂಭಿಸಿ ಆರ್ಥಿಕವಾಗಿ ಹೇಗೆ ಸಬಲರಾಗಬೇಕು ಎಂಬುವುದರ ಬಗ್ಗೆ ಸವಿಸ್ತಾರವಾಗಿ ಮಾಹಿತಿ ನೀಡಿದರು. ಈಗಾಗಲೇ 350ಕ್ಕೂ ಹೆಚ್ಚು ವಿಕಲಚೇತನರಿಗೆ ಸ್ವಯಂ ಉದ್ಯೋಗ ಕೈಗೊಂಡು ತಮ್ಮ ಜೀವನವನ್ನು ಕಟ್ಟಿಕೊಂಡಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಂಯೋಜಕ ಸಂತೋಷ ಪಟ್ಟೆದ್ದಾರ್, ತಾಲೂಕು ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರಾದ ಖಾಸಿಂಸಾಬ ಮತ್ತು ಕಲಬುರಗಿ ತಾಲೂಕಿನ ವಿ.ಆರ್.ಡಬ್ಲ್ಯೂ ಹಾಗೂ ಯು.ಆರ್.ಡಬ್ಲ್ಯೂ ಭಾಗವಹಿಸಿದ್ದರು.


ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ 2026ರ ವೇಳಾಪಟ್ಟಿ ಪ್ರಕಟ: ಡಾ. ಸುರೇಶ ಬಿ ಇಟ್ನಾಳ

ಕೊಪ್ಪಳ ಮೇ 28-

ಭಾರತ ಚುನಾವಣಾ ಆಯೋಗವು 2026ರ ಮೇ 14ರಂದು ಹೊರಡಿಸಿದ ಪ್ರಕಟಣೆಯನ್ವಯ ಅರ್ಹತಾ ದಿನಾಂಕ 01.10.2026ಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ 2026ರ ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿರುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ. ಇಟ್ನಾಳ ಅವರು ಹೇಳಿದರು. ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮೇ 27ರಂದು ಜಿಲ್ಲೆಯ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಕರೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ-2026ಕ್ಕೆ ಸಂಬಂಧಿಸಿದಂತೆ 1.10.2026ನ್ನು ಅರ್ಹತಾ ದಿನಾಂಕ ಎಂದು ನಿಗದಿಪಡಿಸಲಾಗಿದೆ. 2026ರ ಜೂನ್ 20 ರಿಂದ ಜೂನ್ 29 ರವರೆಗೆ ಪರಿಷ್ಕರಣೆಯ ಸಿದ್ಧತೆ, ತರಬೇತಿ ಮತ್ತು ಮುದ್ರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಜೂನ್ 30 ರಿಂದ ಜುಲೈ 29ರವರೆಗೆ ಬಿ.ಎಲ್.ಓ.ಗಳಿಂದ ಮನೆ ಮನೆ ಭೇಟಿ ನಡೆಯುತ್ತದೆ. ಜುಲೈ 29ರೊಳಗೆ ಮತಗಟ್ಟೆಗಳ ರ್‍ಯಾಷನಲೈಜೆಷನ್ ನಡೆಯಲಿದೆ. ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿ ಪ್ರಕಟಣೆ ಮಾಡಲಾಗುತ್ತದೆ. ಆಗಸ್ಟ್ 5 ರಿಂದ ಸೆಪ್ಟೆಂಬರ್ 4ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶವಿರುತ್ತದೆ. ಆಗಸ್ಟ್ 5 ರಿಂದ ಅಕ್ಟೋಬರ್ 3 ರವರೆಗೆ ನೋಟೀಸ್ ಅವಧಿ, ಹಕ್ಕುಗಳು ಮತ್ತು ಆಕ್ಷೇಪಣೆಗಳ ವಿಲೇವಾರಿ ನಡೆಯಲಿದೆ. 2026ರ ಅಕ್ಟೋಬರ್ 7 ರಂದು



ಅಂತಿಮ ಮತದಾರರ ಪಟ್ಟಿ ಪ್ರಕಟಣೆ ಮಾಡಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು.

ಬಿಎಲ್ಎ ನೇಮಿಸಲು ಸೂಚನೆ: ಕುಷ್ಟಗಿ, ಕನಕಗಿರಿ, ಗಂಗಾವತಿ, ಯಲಬುರ್ಗಾ, ಕೊಪ್ಪಳ ವಿಧಾನಸಭಾ ಕ್ಷೇತ್ರಗಳು ಸೇರಿದಂತೆ ಕೊಪ್ಪಳ ಜಿಲ್ಲೆಯಲ್ಲಿನ ಒಟ್ಟು 11,92,589 ಮತದಾರ ಪೈಕಿ ಈಗಾಗಲೇ ಶೇ.94.98ರಷ್ಟು ಮ್ಯಾಪಿಂಗ್ ಕಾರ್ಯ ನಡೆದಿರುತ್ತದೆ. ಉಳಿದ 59,853 ಮತದಾರರಿಗೆ ಮ್ಯಾಪಿಂಗ್ ಕಾರ್ಯ ಬಾಕಿ ಇದ್ದು, ಅರ್ಹ ಎಲ್ಲ ಮತದಾರರ ಹೆಸರು ಮತದಾರರ ಪಟ್ಟಿಗೆ ಸೇರ್ಪಡೆಯಾಗಬೇಕಿದೆ. ಕೊಪ್ಪಳ ಜಿಲ್ಲೆಯಲ್ಲಿನ 1315 ಮತಗಟ್ಟೆಗಳಿಗೆ ರಾಜಕೀಯ ಪಕ್ಷಗಳು ಕಡ್ಡಾಯವಾಗಿ ಬಿಎಲ್ಎಗಳನ್ನು ನೇಮಿಸಬೇಕು. ಇದುವರೆಗೆ ಬಿಎಲ್.ಎ.ಗಳನ್ನು ನೇಮಕ ಮಾಡದೇ ಇರುವ ರಾಜಕೀಯ ಪಕ್ಷಗಳು ಕೂಡಲೇ ಬಿಎಲ್ಎಗಳನ್ನು ನೇಮಕ ಮಾಡಲು ಕ್ರಮ ವಹಿಸಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು ಸಭೆಯಲ್ಲಿದ್ದ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಸೂಚನೆ ನೀಡಿದರು.

ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಮಾತನಾಡಿ, ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆಯ ಬಗ್ಗೆ ಜನರಿಗೆ ಏನಾದರು ಗೊಂದಲಗಳಿದ್ದಲ್ಲಿ ತಿಳಿದುಕೊಳ್ಳಲು ಅನುಕೂಲವಾಗುವಂತೆ ಕೊಪ್ಪಳ ಜಿಲ್ಲೆಯ 152 ಗ್ರಾಮ ಪಂಚಾಯತಗಳಲ್ಲಿ ಜೊತೆಗೆ ಪಟ್ಟಣ ಮತ್ತು ನಗರ ಪ್ರದೇಶಗಳ ಪ್ರತಿ ವಾರ್ಡನಲ್ಲಿ ವೋಟರ್ ಫೆಸಿಲಿಟೇಷನ್ ಸೆಂಟರ್ ತೆರೆದು ಅಲ್ಲಿ ಆಸನಗಳ, ಕುಡಿಯುವ ನೀರು, ಇಂಟರನೆಟ್, ಕಂಪ್ಯೂಟರ್ ವ್ಯವಸ್ಥೆ ಮಾಡಲಾಗುತ್ತದೆ. ಹೋರ್ಡಿಂಗ್ಸ್ , ಪೋಸ್ಟರ್, ಕರಪತ್ರ ಮತ್ತು ಜಿಂಗಲ್ಸ್ ಮೂಲಕ ಜನತೆಗೆ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆಯ ಬಗ್ಗೆ ಮಾಹಿತಿ ನೀಡಲಾಗುತ್ತದೆ ಎಂದು ಅವರು ತಿಳಿಸಿದರು.

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆಯ ಬಗ್ಗೆ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಕಸ ವಿಲೇವಾರಿ ವಾಹನಗಳಲ್ಲಿ ಜಿಂಗಲ್ಸ್ ಅಳವಡಿಸಿ ಮತ್ತು ಸಹಕಾರಿ ಸಂಘಗಳು ಹಾಗೂ ನ್ಯಾಯಬೆಲೆ ಅಂಗಡಿಗಳ ಮೂಲಕ ಪ್ರಚಾರ ನಡೆಸಬೇಕು ಎಂದು ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಸಭೆಗೆ ಸಲಹೆ ಮಾಡಿದರು.

ಸಭೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಅಮರೇಗೌಡ ಪಾಟೀಲ್ ಬಯ್ಯಾಪೂರ, ನವೀನ್ ಗುಳಗಣ್ಣನವರ, ಕೃಷ್ಣ ಇಟ್ಟಂಗಿ, ಮಂಜುನಾಥ ಸೊರಟೂರ, ರಾಜು ಬಾಕ್ಳೆ, ಕಳಕನಗೌಡ, ಶರಣು ಶೆಟ್ಟರ್, ಸೋಮನಗೌಡ, ರಮೇಶ ಡಂಬ್ರಳ್ಳಿ, ಮೌನೇಶ್ ಕಿನ್ನಾಳ, ಶಿವಕುಮಾರ್ ಇ., ರಮೇಶ ಎಂ. ಹಾಗೂ ಮತ್ತಿತರರು ಮತ್ತು ಜಿಲ್ಲಾ ಚುನಾವಣಾ ಶಾಖೆಯ ಶಿರಸ್ತೇದಾರರಾದ ನಾಗರಾಜ್ ಸೇರಿದಂತೆ ಚುನಾವಣಾ ಶಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

ಬಿತ್ತನೆ ಬೀಜ ವಿತರಣೆಗೆ ಶಾಸಕ ಪ್ರಭು ಚವ್ಹಾಣ ಚಾಲನೆ

ರೈತರಿಗೆ ಗುಣಮಟ್ಟದ ಬೀಜ ಒದಗಿಸಿ: ಶಾಸಕ ಪ್ರಭು ಚವ್ಹಾಣ ಸೂಚನೆ

ಔರಾದ್,ಮೇ.28-

2026-27ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಔರಾದ(ಬಿ) ರೈತ ಸಂಪರ್ಕ ಕೇಂದ್ರದಲ್ಲಿ ಮೇ.27 ರಂದು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ವರ್ಷ ಮುಂಗಾರು ಶೀಘ್ರ ಬರುವ ಮುನ್ಸೂಚನೆ ಇರುವುದರಿಂದ ರೈತರಿಗೆ ಬಿತ್ತನೆ ಸಮಯಕ್ಕೆ ಬೀಜಗಳು ಲಭ್ಯವಾಗಬೇಕು ಎನ್ನುವ ಉದ್ದೇಶದಿಂದ ಮುಂಚಿತವಾಗಿ ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಲಾಗುತ್ತಿದೆ. ಮುಂಗಾರು ಹಂಗಾಮಿಗೆ ಅಗತ್ಯವಿರುವ ವಿವಿಧ ಬೆಳೆಗಳ ಬೀಜಗಳನ್ನು ಕೃಷಿ ಇಲಾಖೆಯ ಮೂಲಕ ವಿತರಿಸಲಾಗುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ನಿಗದಿತ ದರಕ್ಕಿಂತ ಹೆಚ್ಚು ಬೆಲೆಗೆ ಮಾರಾಟ ಮಾಡಬಾರದು. ಈ ಕುರಿತು ಅಧಿಕಾರಿಗಳು ಹಾಗೂ ಮಾರಾಟಗಾರರ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು. ರೈತರ ಸಂಪರ್ಕ ಕೇಂದ್ರಗಳಲ್ಲಾಗಲಿ, ಖಾಸಗಿ ಕೇಂದ್ರಗಳಲ್ಲಾಗಲಿ ಯಾವುದೇ ಕಾರಣಕ್ಕೂ ರೈತರಿಂದ ಹೆಚ್ಚುವರಿ ಹಣ ವಸೂಲಿ ಮಾಡುವಂತಿಲ್ಲ. ಇಂತಹ ಘಟನೆಗಳು ಎಲ್ಲಿಯಾದರೂ ನಡೆದರೆ ಅಂಥವರ ವಿರುದ್ಧ



ಮುಲಾಜಿಲ್ಲದೇ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದರು. ಬಿತ್ತನೆ ಬೀಜ ಅಥವಾ ರಸಗೊಬ್ಬರ ನೀಡಿದ ನಂತರ ರೈತರಿಗೆ ಕಡ್ಡಾಯವಾಗಿ ರಸೀದಿ ನೀಡಬೇಕು ಎಂದು ನಿರ್ದೇಶನ ನೀಡಿದರು.

ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ದರದ ಪಟ್ಟಿಯನ್ನು ಎಲ್ಲ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರಿಗೆ ಸ್ಪಷ್ಟವಾಗಿ ಕಾಣುವಂತೆ ಕಡ್ಡಾಯವಾಗಿ ಪ್ರದರ್ಶಿಸಬೇಕು. ಯಾವುದೇ ರೈತರಿಗೆ ದರದ ಬಗ್ಗೆ ಗೊಂದಲ ಅಥವಾ ಅನ್ಯಾಯವಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ರೈತರಿಗೆ ಪೂರೈಸುವ ಬಿತ್ತನೆ ಬೀಜಗಳು ಉತ್ತಮ ಗುಣಮಟ್ಟದಿಂದ ಕೂಡಿರಬೇಕು. ಈ ಬಗ್ಗೆ ಅಧಿಕಾರಿಗಳು ರೈತರಿಗೆ ಕೊಡುವ ಮುನ್ನ ಪರಿಶೀಲಿಸಬೇಕು. ಈ ವಿಷಯದಲ್ಲಿ ಯಾವುದೇ ರೀತಿಯ ದೂರುಗಳಿಗೆ ಅವಕಾಶ ಕೊಟ್ಟಲ್ಲಿ ಸುಮ್ಮನಿರುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಪ್ರತಿ ವರ್ಷ ಇಲ್ಲಿಂದ ಮಹಾರಾಷ್ಟ್ರ ಹಾಗೂ ತೆಲಂಗಾಣ ರಾಜ್ಯಗಳಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ಅಕ್ರಮ ಸಾಗಾಟ ನಡೆಯುತ್ತಿರುವುದು ಗಮನಕ್ಕೆ ಬಂದಿದೆ. ಗಡಿ ಭಾಗಗಳಲ್ಲಿ ಅಧಿಕಾರಿಗಳು ವಿಶೇಷ ತಪಾಸಣೆ ನಡೆಸಿ, ಅಕ್ರಮ ಸಾಗಾಟವನ್ನು ಸಂಪೂರ್ಣವಾಗಿ ತಡೆಗಟ್ಟಬೇಕು. ನಮ್ಮ ರೈತರಿಗೆ ಬಂದ ಬಿತ್ತನೆ ಬೀಜ, ರಸಗೊಬ್ಬರ ಅನ್ಯರ ಪಾಲಾಗಬಾರದು. ನಮ್ಮ ರೈತರಿಗೆ ಯಾವುದೇ ರೀತಿಯ ಅನ್ಯಾಯವಾಗಬಾರದು ಎಂದು ಖಡಕ್ ಸೂಚನೆ ನೀಡಿದರು.

ಔರಾದ(ಬಿ) ಕ್ಷೇತ್ರದಲ್ಲಿ ಹೆಚ್ಚಾಗಿ ಬೆಳೆಸಲಾಗುವ ಸೋಯಾಬೀನ್ ಹಾಗೂ ಮತ್ತಿತರೆ ಬೆಳೆಗಳ ಬಿತ್ತನೆ ಬೀಜಗಳನ್ನು ಸಮರ್ಪಕವಾಗಿ ಪೂರೈಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದ್ದೇನೆ. ಕ್ಷೇತ್ರದ ಪ್ರತಿಯೊಬ್ಬ ರೈತರಿಗೂ ಅಗತ್ಯ ಪ್ರಮಾಣದ ಬೀಜಗಳು ಸಿಗುವಂತೆ ಸಮರ್ಪಕ ವ್ಯವಸ್ಥೆ ಮಾಡಬೇಕು. ಯಾವುದೇ ರೈತ ಬೀಜಕ್ಕಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ಎಲ್ಲ ಗ್ರಾಮಗಳಲ್ಲಿ ಕಡ್ಡಾಯವಾಗಿ ಡೊಂಗೂರ ಸಾರಿಸಿ ಬಿತ್ತನೆ ಬೀಜ ವಿತರಿಸುವ ದಿನಾಂಕದ ಬಗ್ಗೆ ತಿಳಿಸಬೇಕು. ರೈತ ಸಂಪರ್ಕ ಕೇಂದ್ರಗಳು ರೈತರ ಸ್ನೇಹಿಯಾಗಿ ಕೆಲಸ ಮಾಡಬೇಕು. ರೈತರಿಗೆ ಯಾವುದೇ ರೀತಿಯ ಅನ್ಯಾಯವಾದರೆ ಸುಮ್ಮನಿರುವುದಿಲ್ಲ. ತಪ್ಪಿತಸ್ಥರು ಯಾರೇ ಇರಲಿ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಸಿದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಧೂಳಪ್ಪ ಪ್ರಾಸ್ತಾವಿಕ ಮಾತನಾಡಿ, ಸೋಯಾಬೀನ್ 36,100 ಕ್ವಿಂಟಾಲ್ ಬೇಡಿಕೆಯ ಪೈಕಿ 31,218 ಕ್ವಿಂಟಾಲ್ ಬಂದಿದೆ. ಹೆಸರು 300 ಕ್ವಿಂಟಾಲ್ ಪೈಕಿ 220 ಕ್ವಿಂಟಾಲ್ ಬಂದಿದೆ. ಹೆಸರು 100 ಕ್ವಿಂಟಾಲ್ ಪೈಕಿ 25 ಕ್ವಿಂಟಾಲ್ ಹಾಗೂ 50 ಕ್ವಿಂಟಾಲ್ ಪೈಕಿ 13 ಕ್ವಿಂಟಾಲ್ ಬಂದಿದೆ. ಉಳಿದ ಎಲ್ಲ ಬಿತ್ತನೆ ಬೀಜಗಳು ಅಗತ್ಯಕ್ಕೆ ಅನುಗುಣವಾಗಿ ದಾಸ್ತಾನು ಮಾಡಿಕೊಳ್ಳಲಾಗಿದೆ. ರೈತರು ಆತಂಕಪಡಬೇಕಿಲ್ಲ ತಮಗೆ ತಿಳಿಸಿದ ದಿನಾಂಕದಂದು ಬಿತ್ತನೆ ಬೀಜ ಪಡೆಯಬೇಕು ಎಂದು ತಿಳಿಸಿದರು.

ಎಲ್ಲ ರೈತರು ಒಂದೇ ಬೆಳೆಗೆ ಮೊರೆ ಹೋಗದೆ ಬೇರೆ-ಬೇರೆ ಬೆಳೆಗಳನ್ನು ಬಿತ್ತನೆ ಮಾಡಿದರೆ ಆರ್ಥಿಕ ಸಂಕಷ್ಟದಿಂದ ತಪ್ಪಿಸಿಕೊಳ್ಳಬಹುದು. ಹಾಗೆಯೇ 80 ಎಂ.ಎಂ ಮಳೆಯಾದ ನಂತರವೇ ಸೋಯಾಬೀನ್ ಬಿತ್ತನೆ ಮಾಡಬೇಕು. ದೊಡ್ಡ ಟ್ರ್ಯಾಕ್ಟರ್‌ಗಳಿಂದ ಹೆಚ್ಚಿನ ಆಳಕ್ಕೆ ಬಿತ್ತನೆ ಮಾಡುವುದರಿಂದ ಮೊಳಕೆ ಒಡೆಯುವುದು ಕಷ್ಟ. ಹಾಗಾಗಿ ರೈತರು ಅಗತ್ಯ ಮುನ್ನೆಚ್ಚರಿಕೆಯೊಂದಿಗೆ ಬಿತ್ತನೆ ಕೈಗೊಳ್ಳಬೇಕು. ಎಲ್ಲ ಬೆಳೆಗಳಿಗೂ ತಪ್ಪದೇ ವಿಮೆ ಮಾಡಿಸಬೇಕು ಎಂದು ರೈತರಿಗೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕೃಷಿಕ ಸಮಾಜದ ಅಧ್ಯಕ್ಷ ಸಂತೋಷ ಹಜಾರೆ, ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಕೃಷಿಕ ಸಮಾಜದ ಸದಸ್ಯ ಗೋವಿಂದರಾವ ಇಂಗಳೆ, ಸಚಿನ ರಾಠೋಡ, ಸಂಜು ವಡೆಯಾರ್ ಸೇರಿದಂತೆ ಕೃಷಿ ಇಲಾಖೆಯ ಅಧಿಕಾರಿಗಳು, ರೈತ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ನಂತರ ಭಂಡಾರಕುಮಟಾ ರೈತ ಸಂಪರ್ಕ ಕೇಂದ್ರದಲ್ಲಿ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.



ಮೇ 30 ಕ್ಕೆ ಬಿಳಿಜೋಳ ಖರೀದಿ ಪ್ರಕ್ರಿಯೆ ಮುಕ್ತಾಯ : ಜೋಳ ಮಾರಾಟ ಮಾಡಲು ಮನವಿ

ವಿಜಯನಗರ ,ಮೇ.28-

ಪ್ರಸಕ್ತ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಮುಂಗಾರು ಮತ್ತು ಹಿಂಗಾರು ಬಿಳಿಜೋಳದ ಖರೀದಿ ಪ್ರಕ್ರಿಯೆಯು ಮೇ 30ಕ್ಕೆ ಮುಕ್ತಾಯಗೊಳ್ಳಲಿದೆ. ಈಗಾಗಲೇ ನೋಂದಾಯಿಸಿಕೊಂಡು ಜೋಳ ಮಾರಾಟ ಮಾಡಲು ಬಾಕಿ ಇರುವ ಜಿಲ್ಲೆಯ ರೈತರು ನಿಗದಿತ ದಿನಾಂಕದೊಳಗೆ ತಮ್ಮ ವ್ಯಾಪ್ತಿಯ ಖರೀದಿ ಕೇಂದ್ರಗಳಿಗೆ ತೆರಳಿ ನಿಯಮಾನುಸಾರ ಮಾರಾಟ ಮಾಡುವಂತೆ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಅವರು ಕೋರಿದ್ದಾರೆ.

ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮ ನಿಯಮಿತವು ಖರೀದಿ ಏಜೆನ್ಸಿ ಯಾಗಿದ್ದು, ಪ್ರತಿ ಎಕರೆಗೆ 15 ಕ್ವಿಂಟಾಲ್‌ನಂತೆ ಗರಿಷ್ಠ 150 ಕ್ವಿಂಟಲ್ ವರೆಗೆ ಪ್ರತಿ ಕ್ವಿಂಟಾಲ್‌ಗೆ ಹೈಬ್ರಿಡ್ ಜೋಳಕ್ಕೆ ರೂ 3,699 ಹಾಗೂ ಜೋಳ ಮಾಲ್ದಂಡಿಗೆ ರೂ.3, 749 ನಂತೆ ಖರೀದಿಸಲಾಗುತ್ತಿದೆ.

ಹೆಚ್ಚಿನ ಮಾಹಿತಿಗಾಗಿ ಹೊಸಪೇಟೆ, ಹಗರಿಬೊಮ್ಮನಹಳ್ಳಿ, ಕೂಡ್ಲಿಗಿ, ಕೊಟ್ಟೂರು, ಹೂವಿನಹಡಗಲಿ ಮತ್ತು ಹರಪನಹಳ್ಳಿ ತಾಲ್ಲೂಕುಗಳ ಎಪಿಎಂಸಿ ಯಾರ್ಡ್‌ನಲ್ಲಿರುವ ಖರೀದಿ ಕೇಂದ್ರಗಳನ್ನು ಅಥವಾ ಆಯಾ ಕೇಂದ್ರದ ಮುಖ್ಯ ಕಾರ್ಯನಿರ್ವಾಹಕರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

31ರಂದು ಕೊಪ್ಪಳದಲ್ಲಿ ಈಜು ಸ್ಪರ್ಧೆ: ಹೆಸರು ನೋಂದಾಯಿಸಿ

ಕೊಪ್ಪಳ ಮೇ 28-

ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಸ್ವಿಮಿಂಗ್ ಕ್ಲಬ್ ಇವರ ಸಹಯೋಗದೊಂದಿಗೆ ಈಜು ಸ್ಪರ್ಧೆಯನ್ನು ಮೇ 31 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿರುವ ಜಿಲ್ಲಾ ಈ ಜ ು ಕ ೊ ಳ ' ದ ' ಲ್ಲಿ ಹಮ್ಮಿಕೊಳ್ಳಲಾಗಿದ್ದು, ಭಾವಹಿಸಲಿಚ್ಚಿಸುವ ಆಸಕ್ತರು ತಮ್ಮ ಹೆಸರನ್ನು ನೋಂದಾಯಿಸಬೇಕೆಂದು ಕೊಪ್ಪಳ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿಠ್ಠಲ ಜಾಬಗೌಡರ ಅವರು ತಿಳಿಸಿದ್ದಾರೆ.

ಒಂದನೇಯ ಪುಟದಿಂದ

ಸಿದ್ದು ಸಿಎಂ ಅಧಿಕಾರ ಅಂತ್ಯ, ಡಿಕೆಶಿ ಸಿಎಂ ಯುಗ ಆರಂಭ

ಎಲ್ಲಾರೂ ಕುಟುಂಬವಾಗಿ ಬಾಳವೇಕು ಎಂಬ ನಂಬಿಕೆ ಇಟ್ಟವನು. ಆರ್ಥಿಕವಾಗಿ, ಸಾಮಾಜಿಕವಾಗಿ ಈ ದೇಶದ ಸಂಪತ್ತು ಎಲ್ಲರಿಗೂ ಸಮಾನವಾಗಿ ಹಂಚಿಕೆ ಆಗಬೇಕು ಎಂಬ ನಂಬಿಕೆ ಇಟ್ಟವನು. ಅದಕ್ಕಾಗಿನೇ ಬುದ್ದನ ವಿಚಾರ, ಬಸವಣ್ಣನ ವಿಚಾರ, ಗಾಂಧೀಜಿ ವಿಚಾರ, ಅಂಬೇಡ್ಕರ್ ವಿಚಾರ ನಮಗೆ ಆದರ್ಶಪ್ರಾಯ ಎಂದು ನಿರ್ಗಮಿತ ಸಿಎಂ ತಿಳಿಸಿದರು.

ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ: ನಾನು ಯಾವತ್ತೂ ಕೂಡ ಅಧಿಕಾರ, ಹಣದ ಹಿಂದೆ ಹೋದವನಲ್ಲ. ಆಸ್ತಿ, ಪಾಸ್ತಿ ಬಗ್ಗೆ ಯೋಚನೆ ಮಾಡಿಲ್ಲ. 1978 ತಾಲೂಕು ಬೋರ್ಡ್ ಮಂಡಳಿ ಸದಸ್ಯನಾದವನು. ಸುಮಾರು 50 ವರ್ಷ ರಾಜಕಾರಣದಲ್ಲಿ ಇದ್ದೇನೆ. ನನ್ನ ರಾಜಕೀಯ ಜೀವನ ತೆರೆದ ಪುಸ್ತಕವಾಗಿದೆ. ಇಂದಿನ ರಾಜಕೀಯದಲ್ಲಿ ಜನ ಶಕ್ತಿ ಇರುವವರು ಮಾತ್ರ ರಾಜಕೀಯದಲ್ಲಿ ಇರಲು ಸಾಧ್ಯ. ನಾನೆಂದೂ ಕೂಡ ನಾನು ನಂಬಿದ ಮೌಲ್ಯಗಳ ಜೊತೆ ರಾಜಿ ಮಾಡಿಕೊಂಡಿಲ್ಲ. ನಂಬಿದ ಸಿದ್ಧಾಂತ ಜೊತೆ ರಾಜಿ ಆಗಿಲ್ಲ. ಪ್ರತಿ ಮನುಷ್ಯನಿಗೆ ಕೂಡ ಬದುಕಿನ ಪ್ರಾಥಮಿಕ ಆದ್ಯತೆಯಾದ ಅನ್ನ, ಆರೋಗ್ಯ, ಶಿಕ್ಷಣ, ವಸತಿ, ಉದ್ಯೋಗ ಒದಗಿಸಬೇಕು ಎಂಬುದು ನನ್ನ ನಂಬಿಕೆ. ಅದಕ್ಕಾಗಿ ಎಲ್ಲಾ ಬಡವರಿಗೆ ಅನ್ನ, ಗೃಹ ಲಕ್ಷ್ಮಿ ಮೂಲಕ 2000 ರೂ. ಕೊಡುವುದು, ಗೃಹ ಜ್ಯೋತಿ ಮೂಲಕ ಉಚಿತ ವಿದ್ಯುತ್, ಯುವ ನಿಧಿ, ಶಕ್ತಿ ಯೋಜನೆ ಕೊಡಲಾಗಿದೆ. ಬರ ಬಂದಾಗ ಬಹಳ ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ. ರಾಜ್ಯದ ಜಲ, ನೆಲ, ಭಾಷೆ ಅದರಲ್ಲಿ ಯಾವತ್ತೂ ರಾಜಿ ಆಗಿಲ್ಲ. ಅದು ರಾಜ್ಯದ ಹಕ್ಕು. 8 ವರ್ಷ ಸಿಎಂ ಆಗಲು, ಎರಡು ಬಾರಿ ಪ್ರತಿಪಕ್ಷ ನಾಯಕನಾಗಲು ಕಾಂಗ್ರೆಸ್ ಅವಕಾಶ ಕೊಟ್ಟಿದೆ ಎಂದು ಹೇಳಿದರು.

ಸಂವಿಧಾನ ಇಲ್ಲದಿದ್ದರೆ ಕುರಿ ಮೇಯಿಸುತ್ತಿದ್ದೆ: ಜೆಡಿಎಸ್ ಪಕ್ಷದಿಂದ ವಜಾ ಮಾಡಿದಾಗ, ನಾನು ಅಹಿಂದ ಚಟುವಟಿಕೆ ಮಾಡುತ್ತಿದ್ದಾಗ ಕಾಂಗ್ರೆಸ್‌ನ ಅಹಮದ್ ಪಟೇಲ್ ಮೂಲಕ ಸೋನಿಯಾ ಗಾಂಧಿ ಅವರನ್ನು ಭೇಟಿ ಮಾಡಿ ಕಾಂಗ್ರೆಸ್ ಸೇರ್ಪಡೆಯಾದೆ. ಆವತ್ತು ನನ್ನ ಜೊತೆ ಎಂಟು ಜನ ಶಾಸಕರು ಕಾಂಗ್ರೆಸ್ ಸೇರಿದ್ದರು. ಅವರಿಗೂ ನಾನೂ ಚಿರಋಣಿ. ರಾಜಕಾರಣದಲ್ಲಿ ಕೊನೆ ಉಸಿರುವ ಇರುವವರೆಗೂ ಕೂಡ ನಾನು ಕೋಮುವಾದಿ ಭಕ್ತಿ ವಿರುದ್ಧ ಹೋರಾಟ ಮಾಡುತ್ತೇನೆ. ಸಂವಿಧಾನ ಇಲ್ಲದಿದ್ದರೆ ವಿದ್ಯಾವಂತನೂ ಆಗುತ್ತಿರಲಿಲ್ಲ, ಶಾಸಕನಾಗುತ್ತಿರಲಿಲ್ಲ, ಮಂತ್ರಿ ಆಗುತ್ತಿರಲಿಲ್ಲ, ಸಿಎಂ ಆಗುತ್ತಿರಲಿಲ್ಲ. ಸಂವಿಧಾನ ಇಲ್ಲದಿದ್ದರೆ ಇಲ್ಲವಾದರೆ ನಾನು ಅವಿದ್ಯಾವಂತನಾಗಿರುತ್ತಿದ್ದೆ, ಕುರಿ ಮೇಯಿಸುತ್ತಿದ್ದೆ. ಸಂವಿಧಾನಕ್ಕೆ ಯಾರೇ ಧಕ್ಕೆ ತಂದರೂ ಅವರ ವಿರುದ್ಧ, ಜನರ ಸಮಾನತೆಗಾಗಿ ನಿರಂತರವಾಗಿ ಹೋರಾಟ ಮಾಡುತ್ತೇನೆ. ಇನ್ನೊಮ್ಮೆ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಅವರಿಗೆ, ನಮ್ಮ ಲಕ್ಷಾಂತರ ಕಾಂಗ್ರೆಸ್ ಕಾರ್ಯಕರ್ತರಿಗೆ ಧನ್ಯವಾದ ಹೇಳುತ್ತೇನೆ ಎಂದರು ಸಿದ್ದರಾಮಯ್ಯ.

ನನಗೆ ರಾಷ್ಟ್ರ ರಾಜಕಾರಣದಲ್ಲಿ ಆಸಕ್ತಿ ಇಲ್ಲ: ಹೈಕಮಾಂಡ್ ನನಗೆ ರಾಜ್ಯಸಭೆಗೆ ಹೋಗಲು ಹೇಳಿದರು. ನಾನು ಅದನ್ನು ವಿನಮ್ರವಾಗಿ ತಿರಸ್ಕರಿದ್ದೇನೆ. ನನಗೆ ರಾಷ್ಟ್ರ ರಾಜಕಾರಣದಲ್ಲಿ ಆಸಕ್ತಿ ಇಲ್ಲ. ರಾಜ್ಯ ರಾಜಕೀಯದಲ್ಲಿ ಆಸಕ್ತಿ ಇದೆ. ರಾಜ್ಯದ ಜನರು ನನ್ನನ್ನು ಐದು ವರ್ಷಕ್ಕೆ ಆಯ್ಕೆ ಮಾಡಿದ್ದಾರೆ. ಇನ್ನೂ ಎರಡು ವರ್ಷ ಶಾಸಕನಾಗಿ ಕೆಲಸ ಮಾಡುತ್ತೇನೆ. ನಾನು ಸಕ್ರಿಯ ರಾಜಕೀಯದಲ್ಲಿ ಮುಂದುವರಿಯುತ್ತೇನೆ. ನಾನೇ ಸ್ವಯಂಪ್ರೇರಿತವಾಗಿ ಅವರು ಹೇಳಿದ ಕೂಡಲೇ ರಾಜೀನಾಮೆ ಕೊಟ್ಟಿದ್ದೇನೆ. ಹೈಕಮಾಂಡ್ ಹಾಗೂ ಸಿಎಲ್‌ಪಿ ಮುಂದಿನ ಸಿಎಂ ಆಯ್ಕೆ ಮಾಡಲಿದೆ. ಅವರು ಆಯ್ಕೆ ಮಾಡಿದ ವ್ಯಕ್ತಿ ರಾಜ್ಯದ ಸಿಎಂ ಆಗಿರುತ್ತಾರೆ ಎಂದು ಹೇಳಿದರು.

ದಲಿತ ಮುಖ್ಯಮಂತ್ರಿ ಆಗ್ರಹಿಸಿ ಛಲವಾದಿ ಮಹಾಸಭಾದ ಪ್ರತಿಭಟನೆ ಪರಮೇಶ್ವರ್ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡುವಂತೆ ಒತ್ತಾಯ

ಕಾರ್ಯದರ್ಶಿ, ಬಾಬು (ಬಾಜಿ) ಉಪಾಧ್ಯಕ್ಷರು, ಪುಷ್ಪರಾಜ್ ಉಪಾಧ್ಯಕ್ಷರು, ವಿಜಯ ಪ್ರಸಾದ್ ಪಿ. ಹಾಗೂ ಯಲ್ಲಪ್ಪ ಬಿ. ಜಂಟಿ ಕಾರ್ಯದರ್ಶಿಗಳು, ಎಸ್. ಪ್ರಕಾಶ್ ಕಾರ್ಯದರ್ಶಿ, ಶಿವಕುಮಾರ ಹನುಮಾಪೂರು, ಶರಣಪ್ಪ ನಂದಿಹಾಳ, ನಿರುಪದಿ ಸಾಸುಲಮಾರಿ ಸಂಘಟನಾ ಕಾರ್ಯದರ್ಶಿಗಳು, ಚಿನ್ನರಾಯುಡು ಜಿಲ್ಲಾ ಖಜಾಂಚಿ ಸೇರಿದಂತೆ ಮಹಾಸಭಾದ ಪದಾಧಿಕಾರಿಗಳು, ಆಂಜನೇಯ ಕೊಂಬಿನ್. ವೀರೇಶ್ ಗಾಣದಾಳ ಈರಣ್ಣ ಕುರುಡಿ.. ಮಲ್ಲಿಕಾರ್ಜುನ್ . ಪಿ ಯಲ್ಲಪ್ಪ ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಸಮುದಾಯದ ಮುಖಂಡರು ಭಾಗವಹಿಸಿದ್ದರು.

ಗ್ರಾಮೀಣ ಭಾಗದ ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ಅಗತ್ಯ - ವೆಂಕಟೇಶ ದೊರೆ

ಕ್ರೀಡೆಗಳಲ್ಲಿ ಸಾಧನೆ ಮಾಡಿದ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ಮಕ್ಕಳಿಗೆ ಅಭಿನಂದಿಸಲಾಯಿತು. ಸಮಾರಂಭದ ಕೊನೆಯಲ್ಲಿ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ನೋಡುಗರ ಗಮನ ಸೆಳೆದವು. ವೇದಿಕೆಯಲ್ಲಿ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ನಾಗರಾಜ ಪಲಕನಮರಡಿ, ಕಾರ್ಯದರ್ಶಿ ದೀಪಾ ಸೇರಿದಂತೆ ಶಿಕ್ಷಕರು, ಪೋಷಕರು ಇದ್ದರು.

ಚುಕ್ಕಿ ಸೂಗಪ್ಪ ಸಾಹುಕಾರ ನೇತೃತ್ವದಲ್ಲಿ ಮುಸ್ಲಿಂರಿಗೆ ಶುಭಾಷಯ ವಿನಿಮಯ.

ವರೊಂದಿಗೆ ಕಾಂಗ್ರೆಸ್ ಹಿರಿಯ ಮುಖಂಡ ವಾಣಿಜ್ಯೋದ್ಯಮಿ ಚುಕ್ಕಿ ಸೂಗಪ್ಪ ಸಾಹುಕಾರ ನೇತೃತ್ವದಲ್ಲಿ ಹಬ್ಬದ ಶುಭಾಶಯಗಳು ವಿನಿಮಯ ಮಾಡಲಾಯಿತು. ಈ ಸಂದ ರ್ಭದಲ್ಲಿ ಪ.ಪಂಚಾಯತಿ ಅದ್ಯಕ್ಷ ಹಾಜಿಚೌದ್ರಿ, ಸದಸ್ಯರಾದ ಹಸೇನ ಅಲಿ ಸಾಬ್, ಮೌಲಾಸಾಬ ವರ್ಚ ಸ್, ಮಾರ್ಕಪ್ಪ, ಮಾಜಿ ಸದಸ್ಯರಾದ ಇರ್ಫಾನ್ ಬಢಾಫುರ್ ಮುಖಂ ಡರಾದ ಜಿ.ವಿರೇಶ, ಕಲ್ಲೂರು ಬಸವರಾಜನಾಯಕ, ಪ.ಪಂ ಮಾಜಿ ಉಪಾದ್ಯಕ್ಷ ಚನ್ನಪ್ಪಗಡ್ಲ, ನಾಗರಾಜ ಚಿನ್ನಾನ್,ಸೂಗಪ್ಪ ಹೂಗಾರ, ಎನ್.ಚಂದ್ರಶೇಖರ,ಹಾಲಿಮಲ್ಲಂಗ್, ಮಮಿ, ಶಾಬೂದ್ದಿನ್, ಸತ್ತರಸಾಬ್, ಪಕ್ರುದ್ದಿನ್, ಮಲ್ಲಪ್ಪ ಎನ್, ಚಂದ್ರಶೇಖರ ಹಡಪದ್, ಜಯಪ್ಪ ಇನ್ನಿತರರು ಇದರು.

ನೆಲ, ಜಲ, ಪರಿಸರದೊಂದಿಗೆ ಮನುಷ್ಯನ ಸಹಬಾಳ್ವೆ ಅತ್ಯಗತ್ಯ: ನ್ಯಾ.ರಾಜೇಶ್ ಎನ್.ಹೊಸಮನೆ



ಬಳ್ಳಾರಿ,ಮೇ 28-

ನೆಲ, ಜಲ, ಪರಿಸರ ಒಂದಕ್ಕೊಂದು ಅನ್ಯೋನ್ಯವಾಗಿ ಸಹಬಾಳ್ವೆಯಿಂದ ನೆಲೆಸಿವೆ. ಮನುಷ್ಯನು ಸಹ ಹೊಂದಿಕೊಂಡು ಸಹಬಾಳ್ವೆ ನಡೆಸುವುದು ಅತ್ಯಗತ್ಯವಾಗಿದೆ ಎಂದು ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಚೇರಿ ಹಾಗೂ ವಿಶ್ರೀಕೃವಿವಿ ಸಹಭಾಗಿತ್ವದಲ್ಲಿ ವಿವಿಯ ಆವರಣದಲ್ಲಿ ಮಂಗಳವಾರ ಆಯೋಜಿಸಿದ್ದ ಪರಿಸರ ಜಾಗೃತಿ ಹಾಗೂ ವಿಶ್ವ ಭೂ ಮತ್ತು ಜಲ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

ಸದ್ಯದ ಪರಿಸ್ಥಿತಿಯಲ್ಲಿ ಜೀವಜಲವನ್ನು ಖರೀದಿಸಿ ಕುಡಿಯುವ ಆಪತ್ತು ಎದುರಾಗಿದೆ. ಮುಂದೊಂದು ದಿನ ಉಸಿರಾಡುವ ಗಾಳಿಯನ್ನು ಖರೀದಿಸುವ ಕಾಲ ಎದುರಾದರೂ ಆಶ್ಚರ್ಯ ಪಡಬೇಕಿಲ್ಲ. 80 ಬಿಲಿಯನ್ ವರ್ಷ ಮಾತ್ರವೇ ಭೂಮಿಯ ಆಯುಷ್ಯ ಉಳಿದಿದ್ದು, ಇದನ್ನು ಅರಿತುಕೊಂಡು ಮಾನವನು ಪರಿಸರ ಸಂರಕ್ಷಣೆಗೆ ಕೈಲಾದ ಕಾರ್ಯ ಮಾಡಬೇಕು ಎಂದರು.

ಪರಿಸರವನ್ನು ಮುಂದಿನ ಪೀಳಿಗೆಗೆ ಉಳಿಸುವ ಅಭಿಯಾನ ಬಿಟ್ಟು ಪರಿಸರ ಸುಧಾರಿಸುವ ಕ್ರಮಗಳನ್ನು ಈಗಲೇ ಅಳವಡಿಸಿಕೊಳ್ಳುವುದು ಸೂಕ್ತ. ಭೂಮಿಯಲ್ಲಿರುವ ಕ್ರಿಮಿ ಕೀಟಗಳು ನಾಶವಾದರೆ ಇಡೀ ಭೂಮಂಡಲವೇ ನಾಶವಾಗುತ್ತದೆ. ಆದರೆ ಮನುಷ್ಯ ನಾಶವಾದರೆ ಭೂಮಿ ಸಂಪದ್ಭರಿತಗುತ್ತದೆ ಎಂದು ಪ್ರತಿಪಾದಿಸಿದರು.

ಮುಖ್ಯ ಅತಿಥಿಗಳಾಗಿ ವೇದಿಕೆಯಲ್ಲಿದ್ದ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವಿಭಾಗೀಯ ಕಚೇರಿಯ ಹಿರಿಯ ಪರಿಸರ ಅಧಿಕಾರಿ ಬಿ.ಎಸ್.ಮುರಳೀಧರ್ ಅವರು ಮಾತನಾಡಿ, ಮಾನವನ ಸರಳ ಜೀವನವೇ ಪರಿಸರದ ಸುಸ್ಥಿರ ಅಭಿವೃದ್ಧಿಗೆ ಪೂರಕವಾಗಿದ್ದು, ಮಕ್ಕಳಿಗೆ ಬಾಲ್ಯದಿಂದಲೇ ಪರಿಸರ ಜಾಗೃತಿ ಮೂಡಿಸುವುದು ನಮ್ಮೆಲ್ಲರ ಕರ್ತವ್ಯ ಎಂದರು.

ಕಸದಿಂದ ರಸ ಉತ್ಪಾದಿಸುವ ಕಲೆ ನಾವೆಲ್ಲ ಕಲಿಯಬೇಕು. ಪ್ಲಾಸ್ಟಿಕ್ ಬಳಕೆಯನ್ನು ಸಾಧ್ಯವಾದಷ್ಟು ತಗ್ಗಿಸಬೇಕು. ನೀರನ್ನು ಅಗತ್ಯಕ್ಕೆ ತಕ್ಕಂತೆ ಮಾತ್ರವೇ ಬಳಸಬೇಕು. ಪಂಚಭೂತಗಳ ರಕ್ಷಣೆ ಮನುಕುಲದ ಮುಂದಿನ ಪೀಳಿಗೆಗೆ ನಾವು ನೀಡುವ ಕೊಡುಗೆ. ಪ್ರತಿ ಮನುಷ್ಯನು ಪರಿಸರ ಯೋಧರಾಗಿ ಕೆಲಸ ಮಾಡುವ ಅನಿವಾರ್ಯತೆ ಇಂದು ಎದುರಾಗಿದೆ ಎಂದು ಹೇಳಿದರು.

ವೇದಿಕೆಯಲ್ಲಿದ್ದ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವಿಭಾಗೀಯ ಕಚೇರಿಯ ಪರಿಸರ ಅಧಿಕಾರಿ ಸಿದ್ದೇಶ್ವರ ಬಾಬು ಅವರು ಮಾತನಾಡಿ, ಉತ್ತಮ ಆರೋಗ್ಯಕ್ಕೆ ಉತ್ತಮ ಪರಿಸರ ಅಗತ್ಯವಿದೆ. ಮಾನವನ ಆಧುನಿಕ ಜೀವನಶೈಲಿಯಿಂದ ಪರಿಸರಕ್ಕೆ ಹಾನಿಯಾಗುತ್ತಿದೆ. ಎಲ್ಲರೂ ಟಿರೆಡ್ಯೂಸ್, ರಿಯೂಸ್, ರಿಸೈಕಲ್‌ಟಿ ಎಂಬ ಸಿದ್ದಾಂತ ಪಾಲಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ವಿವಿಯ ಕುಲಪತಿ ಪ್ರೊ.ಎಂ.ಮುನಿರಾಜು ಅವರು ಮಾತನಾಡಿ, ಹಸಿ ಕಸ ಮತ್ತು ಒಣ ಕಸಗಳ ಸಮರ್ಪಕ ವಿಂಗಡನೆಯಿಂದ ಶೇ.50 ರಷ್ಟು ಪರಿಸರ ಹಾನಿಯನ್ನು ತಡೆಯಬಹುದು. ಸಾವಯವ ಗೊಬ್ಬರ ನಿರ್ಮಾಣ, ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣ ನಮ್ಮೆಲ್ಲರ ಆದ್ಯತೆಯಾಗಬೇಕು. ನೀರಿನ ಸಂರಕ್ಷಣೆಗೆ ಸುಮಾರು 60ಲಕ್ಷ ವೆಚ್ಚದಲ್ಲಿ ವಿವಿ ಆವರಣದಲ್ಲಿ ಚೆಕ್ ಡ್ಯಾಂ ನಿರ್ಮಾಣ ಮತ್ತು ವಿವಿಧ ಹಣ್ಣು, ಹೂವುಗಳ ಸಸಿಗಳನ್ನು ನೆಟ್ಟು ಪೋಷಿಸುವ ಯೋಜನೆಗೆ ಚಾಲನೆ ನೀಡುವುದಾಗಿ ತಿಳಿಸಿದರು.

ಕಾರ್ಯಕ್ರಮ ಆರಂಭಕ್ಕೂ ಮೊದಲು ದಿನಾಚರಣೆಯದ ಸ್ಮರಣಾರ್ಥ ವಿವಿಯ ಆವರಣದಲ್ಲಿ ಗಣ್ಯರು ಸಸಿಗಳನ್ನು ನೆಟ್ಟರು. ವಿವಿಯ ಕುಲಸಚಿ ಪ್ರೊ.ವಿ ಲೋಕೇಶ್, ಪರೀಕ್ಷಾಂಗ ಕುಲಸಚಿವ ಪ್ರೊ.ಎನ್.ಎಂ ಸಾಲಿ, ವಿತ್ತಾಧಿಕಾರಿ ಸ್ಫೂರ್ತಿ ಕೆ.ಜಿ ವೇದಿಕೆಯಲ್ಲಿದ್ದರು.

ಕಾರ್ಯಕ್ರಮದ ಸಂಯೋಜಕರಾದ ಪ್ರಾಣಿಶಾಸ್ತ್ರ ವಿಭಾಗದ ಡಾ.ನಾಗಭೂಷಣ್ ಚರಂತಿಮಠ್ ಪ್ರಾಸ್ತಾವಿಕವಾಗಿ ಮಾತನಾಡಿ, ಸ್ವಾಗತಿಸಿದರು. ವಿದ್ಯಾರ್ಥಿಗಳಾದ ಚನ್ನಬಸವ ಹಾಗೂ ಶಾರದಾ ನಿರೂಪಿಸಿದರು. ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸೋಮಶೇಖರ ವಂದಿಸಿದರು.

ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ, ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

ಜಿಲ್ಲೆಯಲ್ಲಿ ಜೂನ್.28 ರಿಂದ 31 ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ:

ಲಸಿಕೆಯಿಂದ ಯಾವುದೇ ಮಗು ವಂಚಿತರಾಗಬಾರದು-ಡಿಸಿ



ಬೀದರ, ಮೇ.28-

ಜಿಲ್ಲೆಯಲ್ಲಿ ಜೂನ್.28 ರಿಂದ ಜೂನ್ 31 ರವರೆಗೆ ಹಮ್ಮಿಕೊಳ್ಳಲಾಗಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಯಶಸ್ಸಿಗೆ ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ಮಾಡಬೇಕೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಸೂಚಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.


ಜಿಲ್ಲೆಯ ರೈಲ್ವೆ ನಿಲ್ದಾಣ, ಬಸ್ ನಿಲ್ದಾಣ, ಸಕ್ಕರೆ ಕಾರ್ಖಾನೆಗಳು, ಇಟ್ಟಿಗೆ ಭಟ್ಟಿಗಳು ಹಾಗೂ ವಲಸೆ ಕಾರ್ಮಿಕರು ವಾಸಿಸುವ ಹೈರಿಸ್ಕ್ (ಅಪಾಯದ ಅಂಚಿನಲ್ಲಿರುವ) ಪ್ರದೇಶಗಳು ಮತ್ತು ಕೊಳಚೆ ಪ್ರದೇಶಗಳ ಕಡೆಗೆ ಹೆಚ್ಚಿನ ಗಮನ ಹರಿಸಬೇಕು. ಯಾವುದೇ ಒಂದು ಮಗುವೂ ಲಸಿಕೆಯಿಂದ ವಂಚಿತರಾಗಬಾರದು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಮನೆ-ಮನೆ ಭೇಟಿ ಸಂದರ್ಭದಲ್ಲಿ ಯಾವುದೇ ತಪ್ಪು ಮಾಹಿತಿ ಬರದಂತೆ ಕಟ್ಟುನಿಟ್ಟಿನ ಮೇಲ್ವಿಚಾರಣೆ ನಡೆಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲೆಯಲ್ಲಿ ಡಿಸೆಂಬರ್ 2025 ರೊಳಗೆ ಜನಿಸಿದ 0 ಯಿಂದ 5 ವರ್ಷದೊಳಗಿನ ಒಟ್ಟು 2,13,213 ಮಕ್ಕಳಿಗೆ (ಗ್ರಾಮೀಣ ಮತ್ತು ನಗರ ಪ್ರದೇಶ ಸೇರಿ) ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಜೂನ್ 29 ರಿಂದ ಜೂನ್ 31 ರವರೆಗೆ ಜಿಲ್ಲೆಯ ಒಟ್ಟು 3,35,347 ಮನೆಗಳಿಗೆ ಆರೋಗ್ಯ ಕಾರ್ಯಕರ್ತರ ತಂಡಗಳು ಭೇಟಿ ನೀಡಿ ಬಿಟ್ಟು ಹೋದ ಮಕ್ಕಳಿಗೆ ಲಸಿಕೆ ನೀಡಲಿದ್ದಾರೆ. ಲಸಿಕೆ ಕಾರ್ಯಕ್ರಮಕ್ಕಾಗಿ ಜಿಲ್ಲಾದ್ಯಂತ ಒಟ್ಟು 1077 ತಂಡಗಳನ್ನು ರಚಿಸಲಾಗಿದೆ. ಇದರಲ್ಲಿ ಜೂನ್ 28 ರಂದು 996 ಬೂತ್‌ಗಳು, 11 ಸಂಚಾರಿ ತಂಡಗಳು ಹಾಗೂ 70 ಟ್ರಾನ್ಸಿಟ್ ತಂಡಗಳು ಕಾರ್ಯನಿರ್ವಹಿಸಲಿವೆ. ಈ ಬೃಹತ್ ಕಾರ್ಯಕ್ಕಾಗಿ 2154 ಲಸಿಕೆದಾರರನ್ನು ಹಾಗೂ ಮೇಲ್ವಿಚಾರಣೆಗಾಗಿ 216 ಜನರನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿ ಹಾಗೂ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಜಿಲ್ಲಾ ನೋಡಲ್ ಅಧಿಕಾರಿ ಡಾ.ಶಿವಶಂಕರ ಬಿ. ಮಾತನಾಡಿ, ಭಾರತವು 2014 ರಲ್ಲೇ ಪೋಲಿಯೋ ಮುಕ್ತ ದೇಶವೆಂದು ಘೋಷಿಸಲ್ಪಟ್ಟಿದ್ದರೂ, ನೆರೆ ರಾಷ್ಟ್ರಗಳಾದ ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನಗಳಲ್ಲಿ ಇನ್ನೂ ಪೋಲಿಯೋ ಪ್ರಕರಣಗಳು ವರದಿಯಾಗುತ್ತಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ಈ ಲಸಿಕಾ ಅಭಿಯಾನವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಈ ಸಭೆಯಲ್ಲಿ ಬೀದರ ಮಹಾನಗರ ಪಾಲಿಕೆಯ ಆಯುಕ್ತರಾದ ಮುಕುಲ್ ಜೈನ್, ಜಿಲ್ಲೆಯ ಎಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳಾದ ಡಾ. ರಾಜಶೇಖರ ಪಾಟೀಲ, ಡಾ. ಶಂಕ್ರೆಪ್ಪಾ ಬೊಮ್ಮಾ, ಡಾ. ಅನೀಲ ಚಿಂತಾಮಣಿ, ಡಾ. ದಿಲೀಪ್ ಡೊಂಗರೆ, ಸಾವಿತ್ರಿಬಾಯಿ, ಉಮೇಶ ಬಿರಾದರ, ಲೋಕೇಶ ಸಲಗರ, ಶಿವಶಂಕರ ಬೇಮಳಗಿ, ಗುರುನಾಥ ಕವಳೆ, ದೇವಿದಾಸ ಸೇರಿದಂತೆ ಎಲ್ಲಾ ತಾಲೂಕಾ ಆರೋಗ್ಯ ಅಧಿಕಾರಿಗಳು, ಅಂತರ ಇಲಾಖೆಯ ಅಧಿಕಾರಿಗಳು ಜಿಲ್ಲಾ ಆರ್.ಸಿ.ಹೆಚ್. ಕಚೇರಿಯ ಸಿಬ್ಬಂದಿ ವರ್ಗದವರು ಸಮನ್ವಯ ಸಮಿತಿಯ ಸಭೆಯಲ್ಲಿ ಉಪಸ್ಥಿತರಿದ್ದರು. ಕೊನೆಯಲ್ಲಿ ವಂದನಾರ್ಪಣೆ ಯೊಂದಿಗೆ ಜಿಲ್ಲಾ ಸಮನ್ವಯ ಸಮಿತಿ ಸಭೆಯು ಮುಕ್ತಾಯಗೊಳಿಸಲಾಯಿತು.

ರಾಯಚೂರು: ಎನ್‌ಟಿಆರ್ 103ನೇ ಜಯಂತಿ ಆಚರಣೆ



ರಾಯಚೂರು, ತೆಲುಗಿನ ನಟ ಸಾರ್ವಭೌಮ ಡಾ. ನಂದಮೂರಿ ತಾರಕ ರಾಮಾರಾವ್ (ಎನ್‌ಟಿಆರ್) ಅವರ 103ನೇ ಜಯಂತಿಯನ್ನು ಬುಧವಾರ ಜಿಲ್ಲೆಯ ಸಿಂಧನೂರಿನಲ್ಲಿ ವಿವಿಧ ಸೇವಾ ಕಾರ್ಯಕ್ರಮಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಅಖಂಡ ಭೂಮಿ ಫೌಂಡೇಶನ್ ಅಧ್ಯಕ್ಷ ನೆಕ್ಕಂಟಿ ಸುರೇಶ್ ನೇತೃತ್ವದಲ್ಲಿ, ವನಸಿರಿ ಫೌಂಡೇಶನ್, ವಿಶ್ವೇಶ್ವರ ಸೇವಾ ಸಮಿತಿ ಹಾಗೂ ವಿವಿಧ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪರಿಸರ ಸಂರಕ್ಷಣೆ, ಶಿಕ್ಷಣ ಪ್ರೋತ್ಸಾಹ ಮತ್ತು ರಕ್ತದಾನ ಶಿಬಿರಗಳಿಗೆ ವಿಶೇಷ ಒತ್ತು ನೀಡಲಾಯಿತು.

ಗಾಂಧೀನಗರ ಶಿವಾಲಯದಿಂದ ಗೋರೆಬಾಳ ಕ್ಯಾಂಪ್ ರಸ್ತೆಯವರೆಗೆ ಸಾಲು ಸಸಿಗಳನ್ನು ನೆಡುವ ಮೂಲಕ ಪರಿಸರ ಜಾಗೃತಿ ಮೂಡಿಸಲಾಯಿತು. ಶಿವಾಲಯದ ಬಳಿ ಪಂಚವಟಿ ಸಸಿಗಳನ್ನು ನೆಟ್ಟು ಹಸಿರು ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಇದೇ ವೇಳೆ, ಪತ್ರಿಕೆ ಹಂಚುತ್ತಾ ವಿದ್ಯಾಭ್ಯಾಸ ಮಾಡುತ್ತಿರುವ ಬಡ ವಿದ್ಯಾರ್ಥಿಗಳಿಗೆ ಉಚಿತ ಸೈಕಲ್‌ಗಳನ್ನು ವಿತರಿಸಿ ಶಿಕ್ಷಣಕ್ಕೆ ಉತ್ತೇಜನ ನೀಡಲಾಯಿತು. ಯುವಕರು ಹಾಗೂ ಅಭಿಮಾನಿಗಳ ಸಹಭಾಗಿತ್ವದಲ್ಲಿ ನಡೆದ ಮೆಗಾ ರಕ್ತದಾನ ಶಿಬಿರವೂ ಯಶಸ್ವಿಯಾಗಿ ನೆರವೇರಿತು.

ಕಾರ್ಯಕ್ರಮದಲ್ಲಿ ಕನ್ನಡ ಕಂಠೀರವ ಡಾ. ರಾಜ್‌ಕುಮಾರ್ ಅವರ ಭಾವಚಿತ್ರಕ್ಕೂ ಪುಷ್ಪನಮನ ಸಲ್ಲಿಸಲಾಯಿತು. ಶ್ರೀ ಕೊಲ್ಲ ಶೇಷಗಿರಿ ರಾವ್ ಗೌರವ ನಮನ ಸಲ್ಲಿಸಿದರು. ಈ ಕುರಿತು ಭಾಜಪಾ ನಾಯಕ ಕೆ. ಕರಿಯಪ್ಪ ಅವರು ಮಾತನಾಡಿ, 'ಡಾ. ರಾಜ್‌ಕುಮಾರ್ ಹಾಗೂ ಎನ್‌ಟಿಆರ್ ದಕ್ಷಿಣ ಭಾರತದ ಚಿತ್ರರಂಗದ ಎರಡು ಕಣ್ಣುಗಳಂತಿದ್ದರು' ಎಂದು ಕೊಂಡಾಡಿದರು.

ಸೋಮಣ್ಣ ಗೌಡ ಮಾತನಾಡಿ, ಎನ್‌ಟಿಆರ್ ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಜಾರಿಗೆ ತಂದ ಅನೇಕ ಜನಪರ ಸುಧಾರಣೆಗಳನ್ನು ಇಂದು ದೇಶದಾದ್ಯಂತ ಅನುಸರಿಸಲಾಗುತ್ತಿದೆ ಎಂದು ಹೇಳಿದರು. ಇಂತಹ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸಿದ ಅಖಂಡ ಭೂಮಿ ಫೌಂಡೇಶನ್ ಅಧ್ಯಕ್ಷ ನೆಕ್ಕಂಟಿ ಸುರೇಶ್ ಅವರನ್ನು ಬಸವರಾಜ್ ನಾಡೇಗೌಡ ಅವರು ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಡಾ. ಚೆನ್ನನಗೌಡ, ಡಾ. ಶರಣಬಸವ ದೇವಿರೆಡ್ಡಿ, ಅರಣ್ಯಾಧಿಕಾರಿ ಬಸವನಗೌಡ ಅಳ್ಳೀ ಪುರ, ಕಮ್ಮವರಿ ಸಂಘದ ಅಧ್ಯಕ್ಷ ಬೂರುಗುಪಳ್ಳಿ ಶ್ರೀಹರ್ಷ, ತಾಲೂರಿ ಸುಬ್ಬರಾವ್, ಅಮರೇಗೌಡ ಮಲ್ಲಾ ಪುರ, ಲಯನ್ಸ್ ಕ್ಲಬ್ ಅಧ್ಯಕ್ಷ ವೆಂಕ ಟೇಶ, ಶ್ರೀನಿವಾಸ್, ವಿಶ್ವ ಹಿಂದೂ ಪರಿಷತ್ ಪದಾಧಿಕಾರಿಗಳು.

2 ಕೋಟಿ ವೆಚ್ಚದ ಸುಸಜ್ಜಿತ ಮೀನು ಮಾರುಕಟ್ಟೆ ನಿರ್ಮಾಣ

ವಿಜಯನಗರ,ಮೇ.28-

ಮೀನುಗಾರರ ಆರ್ಥಿಕ ಸುಧಾರಣೆ ಹಾಗೂ ಮೂಲಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ತರಕಾರಿ ಮಾರುಕಟ್ಟೆಯ ಮಾದರಿಯಲ್ಲೇ ಕೆಎಂಇಆರ್‌ಸಿ ಅನುದಾನದಡಿ 2 ಕೋಟಿ ವೆಚ್ಚದಲ್ಲಿ ಸುಸಜ್ಜಿತ ಹಾಗೂ ಪ್ರತ್ಯೇಕ ಮೀನು ಮಾರುಕಟ್ಟೆ ನಿರ್ಮಿಸಲಾಗುವುದು ಎಂದು ಶಾಸಕ ಹೆಚ್.ಆರ್.ಗವಿಯಪ್ಪ ಭರವಸೆ ನೀಡಿದರು.

ನಗರದ ಹೊರವಲಯದಲ್ಲಿನ ಕೊಂಡನಾಯಕನಹಳ್ಳಿಯಲ್ಲಿ ಬುಧವಾರ ಸುಮಾರು 35 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ನೂತನ ಮೀನುಗಾರರ ಕಚೇರಿ ಕಟ್ಟಡ ಉದ್ಘಾಟಿಸಿ ಅವರು ಮಾತನಾಡಿದರು.

ರಸ್ತೆ ಬದಿಯಲ್ಲಿ ಕುಳಿತು ಮೀನು ಮಾರಾಟ ಮಾಡುವುದನ್ನು ತಪ್ಪಿಸಿ, ಮೀನುಗಾರರಿಗೆ ಗೌರವಯುತ ಸ್ಥಾನ ನೀಡಲು ನಾನೇ ಖುದ್ದಾಗಿ ಮಾರುಕಟ್ಟೆ ನಿರ್ಮಾಣಕ್ಕೆ ಬೇಕಾದ ಸ್ಥಳ ಹುಡುಕಿ ಕೊಡುತ್ತೇನೆ. ಮುಂದಿನ ಎರಡು ವರ್ಷಗಳಲ್ಲಿ ಕಟ್ಟಡ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ತಿಳಿಸಿದರು. ಬಡ ಮೀನುಗಾರರು ಮತ್ತು ರೈತರು ಬದುಕಬೇಕಾದರೆ ಹಳೆಯ ಮಾದರಿಯ ಲೈಸೆನ್ಸ್ ಸಿಸ್ಟಮ್ ಮರುಜಾರಿಗೆ ಬರಬೇಕು. ಇದಕ್ಕಾಗಿ ಮುಂದಿನ ದಿನಗಳಲಿ ರಾಜ್ಯ ಮತ್ತು ಆಂಧ್ರ ಸರ್ಕಾರಗಳನ್ನು ಒಗ್ಗೂಡಿಸಿ, ಬೋರ್ಡ್ ಅಧಿಕಾರಿಗಳಿಗೆ ಮತ್ತೊಮ್ಮೆ ಮನವಿ ಸಲ್ಲಿಸಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ಆಂಧ್ರಪ್ರದೇಶ, ಪಶ್ಚಿಮ ಬಂಗಾಳ ಅಥವಾ ತಮಿಳುನಾಡಿನ ಯಾವುದೇ ಒಬ್ಬನೇ ಒಬ್ಬ ದೊಡ್ಡ ಗುತ್ತಿಗೆದಾರನಿಗೆ ಇಡೀ ವ್ಯವಸ್ಥೆಯ ಲಾಭ ಸಿಗಬಾರದು. ದುಡಿಯುವ ಸ್ಥಳೀಯ ಬಡ ಮೀನುಗಾರರ ಶ್ರಮಕ್ಕೆ ತಕ್ಕ ಪ್ರತಿಫಲ ಸಿಗಬೇಕು. ಕನಿಷ್ಠ ಶುಲ್ಕದೊಂದಿಗೆ ಲೈಸೆನ್ಸ್ ನೀಡಿ, ಅವರು ಸ್ವತಂತ್ರವಾಗಿ ಮೀನು ಹಿಡಿದು ಬದುಕಲು ಅವಕಾಶ ಕಲ್ಪಿಸಿ ಕೊಡಬೇಕು. ಅಧಿಕಾರಿಗಳು ಯಾವುದೇ ದೊಡ್ಡ ಕಾಂಟ್ರಾಕ್ಟರ್‌ಗಳಿಗೆ ಪ್ರೋತ್ಸಾಹ ನೀಡದೆ, ನಿಜವಾದ ಸ್ಥಳೀಯ ಫಲಾನುಭವಿಗಳಿಗೆ ಮಾತ್ರ ಮೀನು ಹಿಡಿಯುವ ಹಕ್ಕನ್ನು ನೀಡಬೇಕು ಎಂದು ಅಧಿಕಾರಿಗಳಿಗೆ ಕಡಕ್ ಸೂಚನೆ ನೀಡಿದರು.

ತಾಲ್ಲೂಕಿನಲ್ಲಿ ಪ್ರಸ್ತುತ 7 ಕೆರೆಗಳನ್ನು ಇಲಾಖೆ ವ್ಯಾಪ್ತಿಗೆ ಪಡೆಯಲಾಗಿದ್ದು, ಮುಂದಿನ ದಿನಗಳಲ್ಲಿ ಇನ್ನೂ 15 ರಿಂದ 17 ಕೆರೆಗಳನ್ನು ವಶಕ್ಕೆ ಪಡೆದು ಸ್ಥಳೀಯ ಮೀನುಗಾರರಿಗೆ ಹಂಚಿಕೆ ಮಾಡಲಾಗುವುದು. ಇದರಿಂದ ಸ್ಥಳೀಯರಿಗೆ ಉದ್ಯೋಗ ಮತ್ತು ಆದಾಯ ದೊರೆಯುತ್ತದೆ. ಇದರೊಂದಿಗೆ, ಈ ವರ್ಷ ಅಥವಾ ಬರುವ ವರ್ಷದೊಳಗೆ ಜಲಪ್ರದೇಶದಲ್ಲಿ 'ಫಿಶ್ ಫಾರ್ಮ್' ಯೋಜನೆಗಳನ್ನು ಆರಂಭಿಸಲು ಚಿಂತನೆ ನಡೆಸಲಾಗುವುದು ಎಂದು ತಿಳಿಸಿದ ಅವರು, ಇಲಾಖೆಯಿಂದ ನೀಡಲಾಗುವ ನೆಟ್, ಕಿಟ್ ಸೇರಿದಂತೆ ಯಾವುದೇ ಸೌಲಭ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು.

ಟಿ.ಬಿ. ಡ್ಯಾಂ ಆವರಣದಲ್ಲಿ ಲಭ್ಯವಿರುವ ಪ್ಯಾಕೇಜಿಂಗ್ ಯೂನಿಟ್ ಮತ್ತು ಕೋಲ್ಡ್ ಸ್ಟೋರೇಜ್ ಯೂನಿಟ್ ಸರ್ಕಾರಿ ಸ್ವಾಮ್ಯದಲ್ಲೇ ಸೂಕ್ತ ಶುಲ್ಕದೊಂದಿಗೆ ಸಾರ್ವಜನಿಕವಾಗಿ ನಡೆಸಿ, ಮೀನುಗಾರಿಕಾ ಉದ್ಯಮಕ್ಕೆ ಹೆಚ್ಚಿನ ಉತ್ತೇಜನ ನೀಡಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು.

ಅಲ್ಲದೆ, ಟಿ.ಬಿ. ಡ್ಯಾಂ, ಕಮಲಾಪುರ, ಮಲಪನ ಗುಡಿ ಮುಂತಾದ ಪ್ರದೇಶಗಳಲ್ಲಿ ಮೂರು ಸಾವಿರಕ್ಕೂ ಅಧಿಕ ಮೀನು ಗಾರರ ಕುಟುಂಬ ವಾಸಿಸುತ್ತಿವೆ. ಇವರಲ್ಲಿ ಹೆಚ್ಚಿನವರಿಗೆ ವಸತಿ ಸೌಲಭ್ಯಗಳಿಲ್ಲ. ಅಂತಹವರನ್ನು ಗುರುತಿಸಿ ವಸತಿ ರಹಿತರ ಅರ್ಹ ಫಲಾನುಭವಿಗಳ ಪಟ್ಟಿ ನೀಡಲು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಅವರಿಗೆ ವಸತಿ ವ್ಯವಸ್ಥೆ ಕಲ್ಪಿಸಲು ಅಧಿಕಾರಿಗಳೊಂದಿಗೆ ಚರ್ಚಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಫಲಾನುಭವಿಗಳಿಗೆ ಮೀನು ಹಿಡಿಯುವ ಉಚಿತ ಕಿಟ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಬಿ.ಮಲ್ಲೇಶ್, ಮೀನುಗಾರರ ಸಹಕಾರ ಸಂಘದ ಪದಾಧಿಕಾರಿಗಳಾದ ಮಾಧವ ರಾವ್, ಎರ್ರಿಸ್ವಾಮಿ, ಬಸವರಾಜ್, ಕೊಟ್ರಪ್ಪ ಇದ್ದರು.

ರೈತರ ಬೇಡಿಕೆಯಂತೆ ಜಿಲ್ಲೆಯಲ್ಲಿ ರಸಗೊಬ್ಬರ ದಾಸ್ತಾನು

ಕೊಪ್ಪಳ ಮೇ 28-

ರೈತರ ಬೇಡಿಕೆಯಂತೆ ಜಿಲ್ಲೆಯಲ್ಲಿ ರಸಗೊಬ್ಬರ ದಾಸ್ತಾನು ಮಾಡಲಾಗಿದ್ದು, ಕೊಪ್ಪಳ ಜಿಲ್ಲೆಯಲ್ಲಿ ಯಾವುದೇ ರೀತಿಯ ರಸಗೊಬ್ಬರದ ಕೊರತೆ ಇರುವುದಿಲ್ಲವೆಂದು ಕೊಪ್ಪಳ ಜಂಟಿ ಕೃಷಿ ನಿರ್ದೇಶಕರಾದ ಜಿ.ಡಿ ಕೃಷ್ಣಮೂರ್ತಿ ಅವರು ತಿಳಿಸಿದ್ದಾರೆ.

ಕೊಪ್ಪಳ ಜಿಲ್ಲೆಯಲ್ಲಿ ಏಪ್ರೀಲ್ ನಿಂದ ಮೇ ವರೆಗೆ ರಸಗೊಬ್ಬರ ಬೇಡಿಕೆಯು 33,187 ಟನ್ ಯಿದ್ದು, 43,282 ಟನ್ ರಸಗೊಬ್ಬರ ದಾಸ್ತಾನಿಕರಿಸಿದ್ದು (ಣಟಟಿಜಿಜ್ಞಜ ಆಚ್ಷುಟ್ಟುಖಿ ಸೇರಿ), 10,032 ಟನ್ ರಸಗೊಬ್ಬರ ವಿತರಣೆ ಮಾಡಲಾಗಿದೆ. ಬಾಕಿ ಉಳಿದಿರುವ ದಾಸ್ತಾನು 33,250 ಟನ್ ರಸಗೊಬ್ಬರ ವಿದ್ದು, ಇದರಲ್ಲಿ ಯೂರಿಯಾ 11,004 ಟನ್, ಡಿಎಪಿ 5002 ಟನ್, ಎಂಓಪಿ 1092 ಟನ್, ಕಾಂಪ್ಲೆಕ್ಸ್ 15,740 ಟನ್, ಎಸ್.ಎಸ್.ಪಿ 412 ಟನ್ ಮತ್ತು ಇದರ ಜೊತೆಗೆ 13,520 ಲೀಟರ್ ನ್ಯಾನೋ ಯೂರಿಯಾ, 1825 ಲೀಟರ್ ನ್ಯಾನೋ ಡಿಎಪಿ ಕೃಷಿ ಪರಿಕರ ಮಾರಾಟಗಾರ ಮಳಿಗೆಗಳಲ್ಲಿ ಲಭ್ಯವಿದ್ದು, ಜಿಲ್ಲೆಯಲ್ಲಿ ರಸಗೊಬ್ಬರದ ಕೊರತೆ ಇರುವುದಿಲ್ಲ.

ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿಎಪಿ ಸ್ಪ್ರೇ ಮಾಡುವುದರಿಂದ ಗಿಡಗಳಿಗೆ ನೇರವಾಗಿ ಪೋಷಕಾಂಶ ದೊರೆಯುವುದದರಿಂದ ನೀರು ಹಾಗೂ ಮಣ್ಣನ್ನು ಸಂರಕ್ಷೀಸಬಹುದು. ಕೊಪ್ಪಳ ಜಿಲ್ಲೆಯ ನಾನಾ ಗೋದಾಮುಗಳಿಗೆ ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಅಧಿಕಾರಿಗಳ ತಂಡ ಭೇಟಿ ನೀಡಿ, ಯೂರಿಯಾ ದಾಸ್ತಾನು ಪರಿಶೀಲನೆ ನಡೆಸಲಾಗಿದೆ. ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ರೈತರು ಯೂರಿಯಾ ರಸಗೊಬ್ಬರ ಖರೀದಿಸಲು ರೈತರ ಫ್ರೂಟ್ ಐಡಿ (ಎಫ್.ಐಡಿ) ಸಂಖ್ಯೆ ಕಡ್ಡಾಯಗೊಳಿಸಲಾಗಿದೆ. ರೈತರ ಎಫ್.ಐಡಿ ಸಂಖ್ಯೆ ಬಳಸಿಕೊಂಡು ಅವರು ಹೊಂದಿರುವ ಜಮೀನಿನ ವಿಸ್ತೀರ್ಣ ಮತ್ತು ಬೆಳೆದ ಬೆಳೆಗೆ ಅನುಗುಣವಾಗಿ ಎಷ್ಟು ಪ್ರಮಾಣದ ಯೂರಿಯಾ ಅಗತ್ಯವಿದೆಯೋ ಅಷ್ಟನ್ನು ಮಾತ್ರ ವಿತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ಸಂಪೂರ್ಣ ಪ್ರಕ್ರಿಯೆಯು ಕೆ-ಕಿಸಾನ್ ಯೂರಿಯಾ ವಿತರಣೆ ತಂತ್ರಾಂಶದ ಮೂಲಕವೇ ನಡೆಯಲಿದೆ.

ರೈತರಲ್ಲದವರು ರೈತರ ಹೆಸರಿನಲ್ಲಿ ರಸಗೊಬ್ಬರ ಖರೀದಿಸಿ ಆಕ್ರಮವಾಗಿ ಕಾಳಸಂತೆಯಲ್ಲಿ ಮಾರಾಟ ಮಾಡುವುದನ್ನು ತಡೆಯುವುದು, ರೈತರು ಮಿತವಾಗಿ ಗೊಬ್ಬರ ಬಳಸುವಂತೆ ಮಾಡುವುದು ಹಾಗೂ ಮಾರಾಟದ ಮೇಲೆ ನಿಗಾ ಇರಿಸುವ ಉದ್ದೇಶದಿಂದ ಈ ಕ್ರಮ ಜಾರಿಗೆ ತರಲಾಗಿದೆ. ಎಫ್.ಐಡಿ ಹೊಂದಿಲ್ಲದ ರೈತರು ತಕ್ಷಣವೇ ತಮ್ಮ ಪಹಣಿ, ಬ್ಯಾಂಕ್ ಪಾಸ್ ಬುಕ್ ಮತ್ತು ಆಧಾರ್ ಕಾರ್ಡ್ ದಾಖಲೆಗಳೊಂದಿಗೆ ಸಮೀಪದ ರೈತ ಸಂಪರ್ಕ ಕೇಂದ್ರ, ತೋಟಗಾರಿಕೆ ಇಲಾಖೆ, ಕಂದಾಯ ಇಲಾಖೆ, ಗ್ರಾಮ ಒನ್, ಸಾಮಾನ್ಯ ಸೇವಾ ಕೇಂದ್ರಗಳಿಗೆ ಭೇಟಿ ನೀಡಿ ಎಫ್.ಐಡಿ ಸೃಜಿಸಿಕೊಳ್ಳಬೇಕು. ಈಗಾಗಲೇ ಎಫ್.ಐಡಿ ಹೊಂದಿರುವ ರೈತರು ತಮ್ಮ ಎಲ್ಲ ಸರ್ವೆ ನಂಬರ್‌ಗಳನ್ನು ಅದಕ್ಕೆ ಜೋಡಣೆ ಮಾಡಿಸಿಕೊಳ್ಳಲು ಅವಕಾಶವಿದೆ. ಇದರಿಂದ ತಮ್ಮ ಎಲ್ಲಾ ಜಮೀನುಗಳಿಗೆ ರಸಗೊಬ್ಬರ ಪಡೆಯಬಹುದಾಗಿದೆ.

ನಿಮ್ಮೂರು ಸುದ್ದಿ

ಸಂಪಾದಕೀಯ

‘ಅಹಿಂದ’ ನಾಯಕನ ನಿರ್ಗಮನ

ದೇವರಾಜ ಅರಸು ಹಾಕಿಕೊಟ್ಟ ಹಿಂದುಳಿದ ವರ್ಗಗಳ ಸರ್ವತೋಮುಖ ಅಭಿವೃದ್ಧಿಗಾಗಿನ ಭದ್ರ ಬುನಾದಿಯ ಮೇಲೆ ಸಿದ್ದರಾಮಯ್ಯನವರು ಭವ್ಯ ಸೌಧವನ್ನೇ ನಿರ್ಮಿಸುವ ಅಪೂರ್ವ ಅವಕಾಶವಿತ್ತು. ಅದಕ್ಕೆ ಅಧಿಕಾರವೆಂಬ ಅಸ್ತ್ರವಿತ್ತು. ಪಕ್ಷದ, ಶಾಸಕರ, ಸಚಿವರ ಮತ್ತು ಹೈಕಮಾಂಡಿನ ಬೆಂಬಲವೂ ಇತ್ತು. ಆದರೆ, ಸಿದ್ದರಾಮಯ್ಯನವರ ನಿರಾಸಕ್ತಿ ಎಲ್ಲವನ್ನು ಮಣ್ಣುಗೂಡಿಸಿತು.

ಅತಿ ಹೆಚ್ಚು ಅವಧಿಗೆ ಕರ್ನಾಟಕದ ಮುಖ್ಯಮಂತ್ರಿಯಾದ ಸಿದ್ದರಾಮಯ್ಯನವರು, ಇಂದು ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ನೀಡುವ ಮೂಲಕ, ಅಹಿಂದ ವರ್ಗ ಅನಾಥವಾಗಿದೆ. ಜನಸಮೂಹವನ್ನು ಪ್ರಭಾವಿಸಬಲ್ಲ ನಾಯಕನಿಂದ ವಂಚಿತವಾಗಿದೆ.



ರಾಜೀನಾಮೆ ಎನ್ನುವುದು, ಒಬ್ಬ ವ್ಯಕ್ತಿ ಒಂದು ಹುದ್ದೆಯಿಂದ ಕೆಳಗಿಳಿಯುವ, ಮತ್ತೊಬ್ಬ ಮೇಲೇರುವ ಪ್ರಕ್ರಿಯೆಯಂತೆ ಕಂಡರೂ, ರಾಜಕಾರಣದಲ್ಲಿ ಇಂಥದ್ದೆಲ್ಲ ಸಹಜ ಎನಿಸಿದರೂ, ಸಿದ್ದರಾಮಯ್ಯನವರ ವಿಚಾರದಲ್ಲಿ ಕೊಂಚ ಭಿನ್ನವಾಗಿದೆ. ಮೊದಲಿಗೆ ಸ್ವತಃ ಸಿದ್ದರಾಮಯ್ಯನವರೇ ಇದಕ್ಕೆ ಸಿದ್ಧರಾಗಿರಲಿಲ್ಲ. ಅದಕ್ಕೆ ಕಾರಣ ಸಿದ್ದರಾಮಯ್ಯನವರ ವ್ಯಕ್ತಿತ್ವ, ನಾಯಕತ್ವ ಮತ್ತು ಆಡಳಿತದ ಬಗ್ಗೆ ಕಾಂಗ್ರೆಸ್ ಹೈಕಮಾಂಡ್‌ಗಿದ್ದ ವಿಶ್ವಾಸ. ಜೊತೆಗೆ ಸೋನಿಯಾ, ರಾಹುಲ್ ಗಾಂಧಿಯವರೊಂದಿಗಿದ್ದ ಒಡನಾಟ. ಅಷ್ಟು ಸುಲಭವಾಗಿ ರಾಜೀನಾಮೆ ಕೇಳುವುದಿಲ್ಲ ಎಂಬುದು ಸಿದ್ದರಾಮಯ್ಯನವರ ಅಚಲ ನಂಬಿಕೆಯಾಗಿತ್ತು. ಹಾಗಾಗಿ ಇದು ಸ್ವತಃ ಸಿದ್ದರಾಮಯ್ಯನವರಿಗೆ ಶಾಕ್ ನೀಡುವ ಸಂಗತಿಯಾಗಿ ಮೌನಕ್ಕೆ ದೂಡಿತ್ತು.

ಇಂದು ಸಚಿವ ಸಂಪುಟ ಸಹದ್ಯೋಗಿಗಳೊಂದಿಗೆ ನಡೆದ ಬ್ರೇಕ್‌ಫಾಸ್ಟ್‌ನಲ್ಲಿ, ಡಿ.ಕೆ. ಶಿವಕುಮಾರ್ ಭಾಗಿಯಾಗಿ, ಸಿದ್ದರಾಮಯ್ಯನವರ ಕಾಲಿಗೆ ಎರಗಿದ್ದು, ಬೆಂಬಲ ಕೋರಿದ್ದು- ಸಿದ್ದರಾಮಯ್ಯನವರನ್ನು ಸಹಜಸ್ಥಿತಿಗೆ ಮರಳಿ ತಂದಿತ್ತು.

1983ರಿಂದ ರಾಜಕಾರಣದಲ್ಲಿರುವ ಸಿದ್ದರಾಮಯ್ಯನವರಿಗೆ ಇದೆಲ್ಲ ಸಹಜ ಎನಿಸಬಹುದು. ಆದರೆ, ಸಿದ್ದರಾಮಯ್ಯನವರನ್ನು ನಂಬಿದ ಅಹಿಂದ ವರ್ಗ, ಇದನ್ನು ಅಷ್ಟೇ ಸುಲಭವಾಗಿ ಸ್ವೀಕರಿಸುವುದಿಲ್ಲ. ಹಾಗಾಗಿ ರಾಜ್ಯದ ಬಹಳ ದೊಡ್ಡ ಸಂಖ್ಯೆಯಲ್ಲಿರುವ ಅಹಿಂದ ವರ್ಗಕ್ಕೆ ಇದು ಬೇರೆಯದೇ ಸಂದೇಶವನ್ನು ರವಾನಿಸುತ್ತದೆ. ನಾಯಕನ ನಿರ್ಗಮನದಿಂದ ಅಹಿಂದ ವರ್ಗ ನಿಜಕ್ಕೂ ದಿಕ್ಕಿಲ್ಲದಂತಾಗುತ್ತದೆ.

70ರ ದಶಕದ ಹಿಂದಕ್ಕೆ ಕರ್ನಾಟಕದ ರಾಜಕಾರಣದಲ್ಲಿ ಬಲಾಢ್ಯ ಸಮುದಾಯಗಳಾದ ಲಿಂಗಾಯತ ಮತ್ತು ಒಕ್ಕಲಿಗರದೇ ಮೇಲುಗೈಯಾಗಿತ್ತು. ಅವರ ನಡುವೆಯೇ ಅಧಿಕಾರ ಹಂಚಿಕೆಯಾಗುತ್ತಿತ್ತು. ಆ ಬಿಗಿ ಹಿಡಿತದಿಂದ ಕರ್ನಾಟಕದ ರಾಜಕಾರಣವನ್ನು ಬಿಡಿಸಿದವರು; ದುರ್ಬಲರು, ದಮನಿತರು ಕೂಡ ರಾಜಕೀಯ ಅಧಿಕಾರ ಪಡೆಯಬೇಕೆಂಬ ಕನಸು ಕಂಡವರು ದೇವರಾಜ ಅರಸು. ಅರಸು, ಬರೀ ಕನಸು ಕಾಣಲಿಲ್ಲ, ಅಧಿಕಾರದಲ್ಲಿದ್ದಷ್ಟು ದಿನವೂ ಅದನ್ನು ಪ್ರಜ್ಞಾಪೂರ್ವಕವಾಗಿ ಜಾರಿಗೆ ತಂದರು. ಅದು ಕರ್ನಾಟಕದ ರಾಜಕಾರಣದಲ್ಲಿ ಬಹಳ ದೊಡ್ಡ ಬದಲಾವಣೆಗೆ ಕಾರಣವಾಯಿತು.

ಅರಸು ಅಂದು ತೋರಿದ ಅಂಚಿನ ಜನರ ಬಗೆಗಿನ ಅಂತಃಕರಣದ ಫಲವಾಗಿಯೇ ಇಂದು ಆ ಸಮುದಾಯಗಳು ಸಾಮಾಜಿಕವಾಗಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದುವಂತಾಯಿತು. ಹಲವಾರು ಜನ ರಾಜಕೀಯ ಕ್ಷೇತ್ರದಲ್ಲಿ ಗುರುತಿಸಿಕೊಳ್ಳುವಂತೆ, ಶಾಸಕರಾಗಿ ವಿಧಾನಸೌಧದ ಮೆಟ್ಟಿಲು ಹತ್ತುವಂತೆ, ಸಚಿವರಾಗಿ ಕಾಯ್ದೆ-ಕಾನೂನು ರೂಪಿಸುವ ಮಹತ್ವದ ಪಾತ್ರ ವಹಿಸುವಂತಾಯಿತು. ಅದರಲ್ಲೂ ಹಿಂದುಳಿದ ವರ್ಗದಿಂದ ಬಂದ ಎಸ್.ಬಂಗಾರಪ್ಪ, ಎಂ. ವೀರಪ್ಪ ಮೊಯ್ಲಿ, ಧರಂ ಸಿಂಗ್ ಮತ್ತು ಸಿದ್ದರಾಮಯ್ಯನವರು- ರಾಜ್ಯದ ಅತ್ಯುನ್ನತ ಸ್ಥಾನವಾದ ಮುಖ್ಯಮಂತ್ರಿ ಸ್ಥಾನ ಅಲಂಕರಿಸುವಂತಾಯಿತು. ಇದು ಅಂತಿಂಥ ಸಾಧನೆಯಲ್ಲ, ಇವತ್ತಿನವರೆಗೆ ಯಾರಿಗೂ ಸಾಧ್ಯವಾಗಿಲ್ಲ.

ದೇವರಾಜ ಅರಸು ಅವರು ರಾಜಕಾರಣದಿಂದ ನಿರ್ಗಮಿಸಿದ್ದು 1982ರಲ್ಲಿ. 1982ರಲ್ಲಿಯೇ ಸಿದ್ದರಾಮಯ್ಯನವರು ರಾಜಕಾರಣಕ್ಕೆ ಅಡಿಯಿಟ್ಟದ್ದರು. ಮೊದಲಿಗೆ ತಾಲೂಕು ಬೋರ್ಡ್ ಸದಸ್ಯರಾದರು. ನಂತರ 1983ರಲ್ಲಿ, ಭಾರತೀಯ ಲೋಕದಳ ಪಕ್ಷದಿಂದ, ಚಾಮುಂಡೇಶ್ವರಿ ಕ್ಷೇತ್ರದಿಂದ ಗೆದ್ದು ಶಾಸಕರಾದರು. ಆಗ ರಾಜ್ಯದಲ್ಲಿ ಮೊಟ್ಟ ಮೊದಲ ಬಾರಿಗೆ ಕಾಂಗ್ರೆಸ್ಸೇತರ ಸರ್ಕಾರ ರಚನೆಯಾಗಿತ್ತು. ಅದು ಕೂಡ ದೇವರಾಜ ಅರಸು ಅವರ ಕೊಡುಗೆಯೇ ಆಗಿತ್ತು.

ಸಿದ್ದರಾಮಯ್ಯನವರು, ಅರಸು ಅವರ ಕೊಡುಗೆಗಳನ್ನು, ಅದರಿಂದಾದ ಬದಲಾವಣೆಗಳನ್ನು ಕಣ್ಣಾರೆ ಕಂಡಿದ್ದರು. ರಾಮಕೃಷ್ಣ ಹೆಗಡೆ, ಎಚ್.ಡಿ. ದೇವೇಗೌಡ, ಜೆ.ಎಚ್. ಪಟೇಲ್‌ರಂತಹ ಮಹಾನ್ ನಾಯಕರ ನಡುವೆ ಪಳಗಿದ್ದರು. ರಾಜಕೀಯ ಪಟ್ಟುಗಳನ್ನು ಕರಗತ ಮಾಡಿಕೊಂಡಿದ್ದರು. ರಾಜ್ಯ ರಾಜಕಾರಣದಲ್ಲಿ ಹೊಸ ಭರವಸೆ ಹುಟ್ಟಿಸಿದ್ದರು. ಅದಕ್ಕೆ ಪೂರಕವಾಗಿ ಅಹಿಂದ ಸಮುದಾಯ ಅವರ ಬೆನ್ನಿಗಿದ್ದು ಬೆಂಬಲಿಸಿತ್ತು. ಜೆಡಿಎಸ್‌ನಲ್ಲಿದ್ದಷ್ಟು ದಿನವೂ ಪಕ್ಷದ ಅಧ್ಯಕ್ಷ, ಸಚಿವ, ಉಪಮುಖ್ಯಮಂತ್ರಿಯಾಗಿ ಅಧಿಕಾರ ಅನುಭವಿಸಿದರೆ; ಕಾಂಗ್ರೆಸ್ ಪಕ್ಷ ಸೇರಿದ ನಂತರ, ಪಕ್ಷ 17 ವರ್ಷಗಳ ಕಾಲ ಶಾಸಕಾಂಗ ಪಕ್ಷದ ನಾಯಕನನ್ನಾಗಿ ಮಾಡಿತ್ತು. ಎರಡು ಬಾರಿ ವಿರೋಧ ಪಕ್ಷದ ನಾಯಕ ಹಾಗೂ ಎರಡು ಬಾರಿ ಮುಖ್ಯಮಂತ್ರಿಯನ್ನಾಗಿಸಿತ್ತು. ಅತ್ಯಂತ ಹೆಚ್ಚು ಅವಧಿ ಪೂರೈಸಿದ ಮುಖ್ಯಮಂತ್ರಿ ಎಂಬ ದಾಖಲೆಗೂ ಅವಕಾಶ ಮಾಡಿಕೊಟ್ಟಿತ್ತು. ಇಷ್ಟೆಲ್ಲ ಅವಕಾಶಗಳನ್ನು ಕಲ್ಪಿಸಿಕೊಟ್ಟ ಪಕ್ಷಗಳು ಮತ್ತು ರಾಜ್ಯದ ಜನತೆ ಸಿದ್ದರಾಮಯ್ಯನವರಿಂದ ಭಾರೀ ನಿರೀಕ್ಷೆಗಳನ್ನಿಟ್ಟುಕೊಂಡಿತ್ತು.

ಸಿದ್ದರಾಮಯ್ಯನವರು ಮೊದಲ ಬಾರಿಗೆ ಮುಖ್ಯಮಂತ್ರಿಗಳಾದಾಗ- 2013ರಿಂದ 2018ರವರೆಗಿನ ಅವಧಿಯಲ್ಲಿ- ಡಿನೋಟಿಫಿಕೇಷನ್, ಲೋಕಾಯುಕ್ತ ರದ್ದು ಮಾಡಿದ್ದನ್ನು ಬಿಟ್ಟರೆ, ಜನ ಮೆಚ್ಚುವ ಆಡಳಿತವನ್ನೇ ಕೊಟ್ಟಿದ್ದರು. ಅಧಿಕಾರಕ್ಕೆ ಬರುತ್ತಿದ್ದಂತೆ ಅರಸು ಅವರಂತೆಯೇ 2014ರಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಮಾಡಿಸಿದರು. ಪರಿಶಿಷ್ಟ ಜಾತಿ-ಪಂಗಡಗಳ ಅಭಿವೃದ್ಧಿಗಾಗಿ ಎಸ್ಸಿ ಎಸ್ಪಿ/ಟಿಎಸ್ಪಿ ಕಾಯಿದೆ ಜಾರಿಗೆ ತಂದರು. ಗುತ್ತಿಗೆಯಲ್ಲಿ ಮೀಸಲಾತಿ ಕಲ್ಪಿಸಿದರು. ಬಡ್ತಿ ಮೀಸಲಾತಿಗಳನ್ನು ತಂದರು. ಬಡವರಿಗೆ ಅಕ್ಕಿ ಕೊಟ್ಟು, ಅನ್ನರಾಮಯ್ಯ ಎನಿಸಿಕೊಂಡರು. ನುಡಿದಂತೆ ನಡೆದ ಸರ್ಕಾರ ಎನ್ನುವುದನ್ನು ಕೆಲಸಗಳ ಮೂಲಕ ಮಾಡಿ ತೋರಿಸಿದರು.

ಹಾಗಾಗಿ ಎರಡನೇ ಬಾರಿಗೆ, 2023ರಲ್ಲಿ ಮುಖ್ಯಮಂತ್ರಿಯಾದಾಗ- ನಾಡಿನ ಜನರ ನಿರೀಕ್ಷೆ ಬೆಟ್ಟದಷ್ಟಿತ್ತು. ಆ ನಿರೀಕ್ಷೆಗೆ ತಕ್ಕಂತೆ ಅಧಿಕಾರಕ್ಕೇರುತ್ತಿದ್ದಂತೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದರು. ಆದರೆ, ಅವುಗಳಿಂದ ಆದ ಆರ್ಥಿಕ ಚಲನಶೀಲತೆಯನ್ನು, ಸಾಮಾಜಿಕ ಬದಲಾವಣೆಯನ್ನು ಮತ್ತು ಮಹಿಳಾ ಸಬಲೀಕರಣವನ್ನು- ನಮ್ಮ ಸಾಧನೆ ಎಂದು ಹೇಳಿಕೊಳ್ಳುವಲ್ಲಿ ಎಡವಿದರು. ಇಂದು ಬಿಜೆಪಿಯ ಮೋದಿಯವರೇ ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳಿಂದ ಪ್ರೇರಣೆ ಪಡೆದು, ಇತರ ರಾಜ್ಯಗಳಲ್ಲಿ ಅನುಷ್ಠಾನಗೊಳಿಸಿದರೂ, ಇಲ್ಲಿ ಪಕ್ಷದ ಶಾಸಕರೇ ವ್ಯಂಗ್ಯವಾಡತೊಡಗಿದರು. ಇನ್ನು ಸಚಿವರಲ್ಲಿ ದಕ್ಷತೆ, ಭ್ರಷ್ಟಾಚಾರ ಮುಕ್ತ ಆಡಳಿತ ಎನ್ನುವುದು, ಹಿಂದಿನಂತಿರದಿದ್ದರೂ ತೊಂದರೆಯಿಲ್ಲ; ಬಿಜೆಪಿ ಸರ್ಕಾರಕ್ಕಿಂತ ಕಡಿಮೆಯಾಗಲಿಲ್ಲ.

ಜೊತೆಗೆ ಮುಡಾ ಹಗರಣ, ವಾಲ್ಮೀಕಿ ನಿಗಮದ ಅಕ್ರಮ, ಸಚಿವರ ರಾಜೀನಾಮೆ, ಕ್ರಿಕೆಟ್ ಕಾಲ್ತುಳಿತ- ಈ ವೈಫಲ್ಯಗಳ ಜೊತೆಗೆ, ಎರಡನೇ ಬಾರಿಗೆ ಮುಖ್ಯಮಂತ್ರಿಯಾದ ಸಿದ್ದರಾಮಯ್ಯನವರು, ಐದು ವರ್ಷ ನಾನೇ ಮುಖ್ಯಮಂತ್ರಿ ಎಂದು ಹೇಳುವುದರಲ್ಲಿಯೇ ಕಾಲ ಕಳೆದರು. ಅವರಷ್ಟೇ ಅಲ್ಲ, ಅವರ ಸಚಿವ ಸಂಪುಟ ಸದಸ್ಯರು ಕೂಡ ಅದಕ್ಕೆ ಸ್ವರ ಸೇರಿಸಿ, ಸಮಯ ವ್ಯರ್ಥ ಮಾಡಿದರು. ಸಚಿವ ರಾಜಣ್ಣರನ್ನು ಬಲಿ ಕೊಟ್ಟರು. ಜನರ ಆಶೋತ್ತರಗಳನ್ನು ಮರೆತರು.

ಎಸ್ಸಿ ಪಿ, ಟಿಎಸ್ಪಿ ಕಾಯ್ದೆಯ ಮೂಲಕ ಪರಿಶಿಷ್ಟ ಜಾತಿ-ಪಂಗಡಗಳಿಗೆ ಮೀಸಲಿಟ್ಟ ಹಣವನ್ನು ಬೇರೆಡೆಗೆ ವರ್ಗಾಯಿಸಿ, ಈ ಸರ್ಕಾರವನ್ನು ಅಸ್ತಿತ್ವಕ್ಕೆ ತಂದ ಸಮುದಾಯಗಳಿಗೆ ಸ್ಪಷ್ಟನೆ ನೀಡದೆ ಸುಮ್ಮನಾದರು. ಹಾಗೆಯೇ ಒಳಮೀಸಲಾತಿ ಹಂಚಿಕೆ ವಿಚಾರದಲ್ಲಿ, ದೃಢ ನಿರ್ಧಾರ ತಳೆಯದ ಸಿದ್ದರಾಮಯ್ಯನವರು, ಅಂಚಿನ ಜನರನ್ನು ವಂಚಿಸಿದರು. ಉಪಚುನಾವಣೆ ಸಂದರ್ಭದಲ್ಲಿ ಮುಸ್ಲಿಮರ ಪರ ಧ್ವನಿ ಎತ್ತದೆ, ವಂಶ ಪಾರಂಪರ್ಯ ರಾಜಕಾರಣಕ್ಕೆ ಮಣೆ ಹಾಕಿ ಮುಸ್ಲಿಮರಿಗೆ ದ್ರೋಹ ಬಗೆದರು.

ಬಿಜೆಪಿ ಹಾಗೂ ಆರ್‌ಎಸ್‌ಎಸ್‌ನ ಕೋಮುವಾದಿ ಅಜೆಂಡಾವನ್ನು ಎದುರಿಸಲೆಂದೇ ಈ ರಾಜ್ಯದ ಅಲ್ಪಸಂಖ್ಯಾತರು, ದಲಿತರು, ಕೋಮುವಾದ ವಿರೋಧಿ ಮನೋಭಾವದ ಜನರು ಕಾಂಗ್ರೆಸ್ ಪಕ್ಷದ ಬೆನ್ನಿಗಿದ್ದು ಬೆಂಬಲಿಸಿದ್ದರು. ಆದರೆ, ಆ ವಿಚಾರದಲ್ಲಿ ಅಗತ್ಯವಿರುವ ತಾತ್ವಿಕ, ರಾಜಕೀಯ ನಿಲುವು ತಳೆಯುವಲ್ಲಿ ಸಿದ್ದರಾಮಯ್ಯನವರು ಸೋತರು. ಧರ್ಮಸ್ಥಳದ ಧರ್ಮಾಧಿಕಾರಿಗಳಿಗೆ ಅನುಕೂಲವಾಗುವಂತೆ, ಸೌಜನ್ಯ ಕೇಸು ಕಿಲುಬು ಹಿಡಿಯುವಂತೆ ವರ್ತಿಸಿದರು. ನಾಡಿನ ಜನರ ನಿರೀಕ್ಷೆಗಳನ್ನು ಹುಸಿಗೊಳಿಸಿದರು.

ಅದಕ್ಕಿಂತಲೂ ಹೆಚ್ಚಾಗಿ, ದೇವರಾಜ ಅರಸು ಹಾಕಿಕೊಟ್ಟ ಹಿಂದುಳಿದ ವರ್ಗಗಳ ಸರ್ವತೋಮುಖ ಅಭಿವೃದ್ಧಿಗಾಗಿನ ಭದ್ರ ಬುನಾದಿಯ ಮೇಲೆ ಸಿದ್ದರಾಮಯ್ಯನವರು ಭವ್ಯ ಸೌಧವನ್ನೇ ನಿರ್ಮಿಸುವ ಅಪೂರ್ವ ಅವಕಾಶವಿತ್ತು. ಅದಕ್ಕೆ ಅಧಿಕಾರವೆಂಬ ಅಸ್ತ್ರವಿತ್ತು. ಪಕ್ಷದ, ಶಾಸಕರ, ಸಚಿವರ ಮತ್ತು ಹೈಕಮಾಂಡಿನ ಬೆಂಬಲವೂ ಇತ್ತು. ಆದರೆ, ಸಿದ್ದರಾಮಯ್ಯನವರ ನಿರಾಸಕ್ತಿ ಎಲ್ಲವನ್ನು ಮಣ್ಣುಗೂಡಿಸಿತು. ಸಿದ್ದರಾಮಯ್ಯನವರನ್ನು ಪೊರೆದ, ಪೋಷಿಸಿದ ಅಹಿಂದ ಸಮುದಾಯಗಳು, ಇಂದು ಅನಾಥವಾಗಿವೆ. ಸಾಮಾಜಿಕವಾಗಿ, ರಾಜಕೀಯವಾಗಿ ದಶಕದಷ್ಟು ಹಿಂದಕ್ಕೆ ಜಾರಲಿವೆ. ಅಹಿಂದ ಕೊಂದ ನಾಯಕ ಎಂಬ ಪಟ್ಟಕ್ಕೆ ಸಿದ್ದರಾಮಯ್ಯನವರನ್ನು ಗುರಿ ಮಾಡಲಿವೆ.

ಅಧಿಕಾರದಿಂದ ನಿರ್ಗಮಿಸುತ್ತಿರುವ ಒಬ್ಬ ಹಿರಿಯ ನಾಯಕನಿಗೆ ಹೀಗೆ ಪಟ್ಟ ಕಟ್ಟುವುದು, ಆರೋಪಿಸುವುದು ಸೂಕ್ತವಲ್ಲ. ಆದರೆ, ಆ ಅಂಚಿನ ಸಮುದಾಯಗಳ ಸಂಕಟ, ಸ್ಥಿತಿಗತಿ, ತಬ್ಬಲಿತನ, ಅರಸು ಅಂತಹ ಮತ್ತೊಬ್ಬ ನಾಯಕನಿಗಾಗಿ ಕಾಯುವುದನ್ನು ಕಂಡರೆ- ಹೀಗೆ ಹೇಳದೆ ವಿಧಿಯಿಲ್ಲ. ಕ್ಷಮೆ ಇರಲಿ ಸಿದ್ದರಾಮಯ್ಯನವರೇ

ಯಾರಿಗೆ ಕೊಕ್, ಯಾರಿಗೆ ಅವಕಾಶ; ನೂತನ ಸಂಪುಟದಲ್ಲಿ ಶುರುವಾಗಲಿದೆಯೆ ಮತ್ತಷ್ಟು ಪೀಕಲಾಟ?

ಹೊಸ ಸಂಪುಟದಲ್ಲಿ ಹಳಬರ ಪೈಕಿ ಶೇ.90ರಷ್ಟು ಮಂದಿ ಉಳಿಯುತ್ತಾರೋ ಇಲ್ಲವೋ ಗೊತ್ತಿಲ್ಲ, ಆದರೆ ಕನಿಷ್ಠ ಅರ್ಧಕ್ಕಿಂತ ಹೆಚ್ಚು ಸಚಿವರು ತಮ್ಮ ಸ್ಥಾನ ಉಳಿಸಿಕೊಳ್ಳಲಿದ್ದಾರೆ ಎನ್ನಲಾಗುತ್ತಿದೆ. ನಾಲ್ಕೈದು ಬಾರಿ ಶಾಸಕರಾದ ಹಲವು ಪ್ರಬಲ ಆಕಾಂಕ್ಷಿಗಳು ಪಕ್ಷದಲ್ಲಿದ್ದಾರೆ. ಮುಂದಿನ ಚುನಾವಣೆಗೆ ಕೇವಲ ಎರಡು ವರ್ಷ ಬಾಕಿ ಇರುವುದರಿಂದ, ಎಲ್ಲರಿಗೂ ಅಧಿಕಾರ ಹಂಚುವುದು ಅಸಾಧ್ಯ. ಪರಿಣಾಮವಾಗಿ, ಸಚಿವ ಸ್ಥಾನ ವಂಚಿತರಿಂದ ನಾಳೆಯಿಂದಲೇ ರಾಜ್ಯದಲ್ಲಿ ಅಧಿಕೃತ ಭಿನ್ನಮತೀಯರ ಗುಂಪೊಂದು ಸೃಷ್ಟಿಯಾಗುವುದು ನಿಶ್ಚಿತ

ರಾಜ್ಯ ರಾಜಕಾರಣದಲ್ಲಿ ಐತಿಹಾಸಿಕ ಪಲ್ಲಟವೊಂದು ಸಂಭವಿಸಿದ್ದು, ಮೂರು ವರ್ಷಗಳ ಯಶಸ್ವಿ ಅಧಿಕಾರಾವಧಿಯ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ನೂತನ ಸಿಎಂ ಆಗಿ ಡಿ ಕೆ ಶಿವಕುಮಾರ್ ಅವರು ಅಧಿಕಾರ ಸ್ವೀಕರಿಸುವುದು ಬಹುತೇಕ ಖಚಿತವಾಗಿದೆ. ಈ ನಾಯಕತ್ವ ಬದಲಾವಣೆಯ ಜೊತೆಯಲ್ಲೇ, ಕಳೆದ ಏಳೆಂಟು ತಿಂಗಳುಗಳಿಂದಲೂ ತೀವ್ರ ಚರ್ಚೆಯಲ್ಲಿದ್ದ ಸಚಿವ ಸಂಪುಟದ ಸಂಪೂರ್ಣ ಪುನಾರಚನೆಗೂ ಹೈಕಮಾಂಡ್ ವೇದಿಕೆ ಸಿದ್ಧಪಡಿಸಿದೆ.

ಸಂಪುಟ ಬದಲಾವಣೆಯ ಮುನ್ಸೂಚನೆಗಳು ಈ ಹಿಂದೆಯೇ ಲಭ್ಯವಾಗಿದ್ದವು. ಅಚ್ಚರಿ ಎಂಬಂತೆ ಇಡೀ ಸಚಿವ ಸಂಪುಟವನ್ನು ದೆಹಲಿಗೆ ಕರೆಸಿಕೊಂಡು ಹೈಕಮಾಂಡ್ ಸಭೆ ನಡೆಸಿತ್ತು; ಜೊತೆಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ ಸಿ ವೇಣುಗೋಪಾಲ್ ಅವರ ಉಪಸ್ಥಿತಿಯಲ್ಲಿ ಬೆಂಗಳೂರಿನಲ್ಲೂ ಸಭೆ ನಡೆದಿತ್ತು. ಎರಡೂವರೆ ವರ್ಷಗಳ ಅವಧಿಯಲ್ಲಿ ಸಮರ್ಪಕವಾಗಿ ಕೆಲಸ ಮಾಡದ ಸಚಿವರಿಗೆ ಆ ಸಭೆಗಳಲ್ಲೇ ಕಟ್ಟುನಿಟ್ಟಿನ ಎಚ್ಚರಿಕೆ ರವಾನಿಸುವ ಮೂಲಕ, ಹಾಲಿ ಬದಲಾವಣೆಗೆ ಮುನ್ನುಡಿ ಬರೆಯಲಾಗಿತ್ತು.

ಈಗ ನೂತನ ಸಿಎಂ ಆಗಿ ಡಿ.ಕೆ. ಶಿವಕುಮಾರ್ ಅಧಿಕಾರ ವಹಿಸಿಕೊಳ್ಳುತ್ತಿರುವುದರಿಂದ, ಹೈಕಮಾಂಡ್ ಮಹತ್ವದ ತೀರ್ಮಾನವೊಂದನ್ನು ಕೈಗೊಂಡಿದ್ದು, ಮೂರರಿಂದ ನಾಲ್ಕು ಉಪಮುಖ್ಯಮಂತ್ರಿ (ಡಿಸಿಎಂ) ಹುದ್ದೆಗಳನ್ನು ಸೃಷ್ಟಿಸಲು ಮುಂದಾಗಿದೆ. ಡಿ.ಕೆ. ಶಿವಕುಮಾರ್ ಅವರ ಮೇಲಿರುವ ಇಮೇಜ್ ಸಮಸ್ಯೆ ಹಾಗೂ ಭ್ರಷ್ಟಾಚಾರದ ಆರೋಪಗಳ ಹಿನ್ನೆಲೆಯಲ್ಲಿ, ಅಧಿಕಾರದ ಸಮತೋಲನ (ಬ್ಯಾಲೆನ್ಸ್) ಕಾಯ್ದುಕೊಳ್ಳಲು ಈ ಮೂರ್ನಾಲ್ಕು ಡಿಸಿಎಂ ಹುದ್ದೆಗಳ ಸೃಷ್ಟಿ ಅನಿವಾರ್ಯವಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಹೊಸ ಸಂಪುಟ ರಚನೆಯಲ್ಲಿ ಡಿ.ಕೆ. ಶಿವಕುಮಾರ್ ಅವರು ಏಕಪಕ್ಷೀಯವಾಗಿ ನಿರ್ಧಾರ ತೆಗೆದುಕೊಳ್ಳುವ ಪರಿಸ್ಥಿತಿ ಇರುವುದಿಲ್ಲ. ಯಾರು ಮಂತ್ರಿಯಾಗಬೇಕು ಹಾಗೂ ಯಾರು ಡಿಸಿಎಂ ಆಗಬೇಕು ಎನ್ನುವ ಪ್ರತಿಯೊಂದು ನಿರ್ಧಾರದಲ್ಲೂ ನಿರ್ಗಮಿತ ಸಿಎಂ ಸಿದ್ದರಾಮಯ್ಯ ಅವರ ಅಭಿಪ್ರಾಯಕ್ಕೂ ಅಷ್ಟೇ ಮನ್ನಣೆ ಇರಲಿದೆ. ತಮ್ಮ ಆಪ್ತ ಬೆಂಬಲಿಗರಾದ ಡಾ. ಎಚ್ ಸಿ ಮಹದೇವಪ್ಪ ಮತ್ತು ಬೈರತಿ ಸುರೇಶ್ ಪರವಾಗಿ ಸ್ವತಃ



ಸಿದ್ದರಾಮಯ್ಯನವರೇ ವಕಾಲತ್ತು ವಹಿಸುತ್ತಾರಾ ಇಲ್ಲವಾ ಎನ್ನುವ ಕುತೂಹಲವೂ ರಾಜಕೀಯ ವಲಯದಲ್ಲಿದೆ.

ಹಾಲಿ ಸಂಪುಟದಲ್ಲಿ ಹಲವರ ಕಾರ್ಯವೈಖರಿ ಬಗ್ಗೆ ಈ ಹಿಂದಿನಿಂದಲೂ ತೀವ್ರ ಅಸಮಾಧಾನಗಳಿದ್ದವು. ಪ್ರಮುಖವಾಗಿ ಎಚ್ ಸಿ ಮಹದೇವಪ್ಪ, ಬೈರತಿ ಸುರೇಶ್, ಮಂಕಾಳ ವೈದ್ಯ ಹಾಗೂ ರಹೀಂ ಖಾನ್ ಅವರ ಕಾರ್ಯವೈಖರಿಯ ಬಗ್ಗೆ ಅಪಸ್ವರಗಳಿದ್ದವು. ಇನ್ನೊಂದಡೆ, ಖಾಯಂ ಸ್ಪೀಕರ್ ಅಲ್ಲ, ಮುಂದೆ ಮಂತ್ರಿ ಮಾಡುತ್ತೇವೆ ಎಂಬ ಭರವಸೆ ಪಡೆದಿದ್ದ ಯು ಟಿ ಖಾದರ್ ಅವರು ಸಚಿವ ಆಕಾಂಕ್ಷಿಯಾಗಿದ್ದಾರೆ.

ಖಾತೆಗಳ ಹಂಚಿಕೆಯೂ ಈ ಬಾರಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಡಿ.ಕೆ. ಶಿವಕುಮಾರ್ ಅವರು ಈವರೆಗೆ ಬೆಂಗಳೂರು ನಗರಾಭಿವೃದ್ಧಿ ಹಾಗೂ ಬೃಹತ್ ನೀರಾವರಿಯಂತಹ ಎರಡು ಬೃಹತ್ ಪೋರ್ಟ್‌ಫೋಲಿಯೋಗಳನ್ನು ಹೊಂದಿದ್ದರು. ಮುಖ್ಯಮಂತ್ರಿಯಾದ ಬಳಿಕವೂ ಅವರು ಇವುಗಳನ್ನು ತಮ್ಮಲ್ಲೇ ಉಳಿಸಿಕೊಳ್ಳುತ್ತಾರೆಯೇ ಅಥವಾ ಬೇರೆಯವರಿಗೆ ಬಿಟ್ಟುಕೊಡುತ್ತಾರೆಯೇ ಎನ್ನುವ ಪ್ರಶ್ನೆ ಎದ್ದಿದೆ. ಇದರ ಜೊತೆಗೆ ಎಸ್‌ಟಿ ಕೋಟಾದಡಿ ಸಚಿವರಾಗಿರುವ ಕೆ.ಎನ್. ರಾಜಣ್ಣ, ನಾಗೇಂದ್ರ, ಹಾಗೂ ಇನ್ನೊರ್ವ ಸಚಿವ ಸುಧಾಕರ್ ಅವರ ಸ್ಥಾನಮಾನ, ಹಾಗೂ ಯತೀಂದ್ರ ಅವರಿಗೂ ಮಂತ್ರಿಗಿರಿ ಒಲಿಯುವ ಕುರಿತು ಚರ್ಚೆಗಳು ಬಿರುಸುಗೊಂಡಿವೆ. ಸಿದ್ದರಾಮಯ್ಯನವರು ರಾಜ್ಯಸಭಾ ಸ್ಥಾನ ನಿರಾಕರಿಸಿರುವ ಕಾರಣ ಪುತ್ರ ಯತೀಂದ್ರ ಅವರು ಕೂಡ ನೂತನ ಸಂಪುಟದ ಸಚಿವ ಸ್ಥಾನದ ಆಕಾಂಕ್ಷಿಯಾಗಿದ್ದಾರೆ.

ಹೊಸ ಡಿಸಿಎಂ ಹುದ್ದೆಗಳ ಸೃಷ್ಟಿಯಿಂದಾಗಿ ಜಾತಿ ಸಮೀಕರಣದ ಲೆಕ್ಕಾಚಾರಗಳು ಗರಿಗೆದರಿವೆ. ಒಕ್ಕಲಿಗ ಸಮುದಾಯದ ಡಿ ಕೆ ಶಿವಕುಮಾರ್ ಮುಖ್ಯಮಂತ್ರಿಯಾಗಿರುವುದರಿಂದ, ದಲಿತ ಕೋಟಾದಡಿ ಡಿಸಿಎಂ ಸ್ಥಾನಕ್ಕೆ ಸಿಎಂ ಆಕಾಂಕ್ಷಿಯಾಗಿದ್ದ ಡಾ. ಜಿ ಪರಮೇಶ್ವರ್ ಹಾಗೂ ಪ್ರಿಯಾಂಕ್ ಖರ್ಗೆ ಪ್ರಬಲ ಪೈಪೋಟಿಯಲ್ಲಿದ್ದಾರೆ. ಎಸ್‌ಟಿ ಕೋಟಾದಡಿ ಸತೀಶ್ ಜಾರಕಿಹೊಳಿ ಅವರು, ಮಂತ್ರಿ ಸ್ಥಾನದ ಜೊತೆಗೇ ಕೆಪಿಸಿಸಿ ಅಧ್ಯಕ್ಷ ಸ್ಥಾನವೂ ಬೇಕೂ'' ಎಂದು ಪಟ್ಟು ಹಿಡಿದರೆ, ಡಿಸಿಎಂ ರೇಸ್‌ನಿಂದ ಹೊರಗುಳಿಯಬಹುದು.

ಲಿಂಗಾಯತ ಸಮುದಾಯವನ್ನು ಸಂಪೂರ್ಣವಾಗಿ ಕಡೆಗಣಿಸುವಂತಿಲ್ಲ; ಹೀಗಾಗಿ ಎಂ ಬಿ ಪಾಟೀಲ್ ಹಾಗೂ ಈಶ್ವರ್ ಖಂಡ್ರೆ ಅವರ ಹೆಸರುಗಳು ಮುಂಚೂಣಿಯಲ್ಲಿವೆ, ಇದೇ ವೇಳೆ, ಅಲ್ಪಸಂಖ್ಯಾತರಿಗೂ ಡಿಸಿಎಂ ಸ್ಥಾನ ನೀಡಲೇಬೇಕು ಎನ್ನುವ ಕೂಗು ಪ್ರಬಲವಾಗಿದೆ. ದಾವಣಗೆರೆ ಉಪಚುನಾವಣೆಯ ಘಟನೆಯ ಆರೋಪಗಳ ನಡುವೆಯೂ ಜನಪ್ರಿಯ ನಾಯಕ ಜಮೀರ್ ಅಹ್ಮದ್ ಖಾನ್ ಡಿಸಿಎಂ ರೇಸ್‌ನಲ್ಲಿದ್ದಾರೆ; ಒಂದು ವೇಳೆ ಅವರಿಗೆ ಡಿಸಿಎಂ ಕೈತಪ್ಪಿದರೆ, ರಿಜ್ವಾನ್ ಅರ್ಷದ್, ತನ್ವೀರ್ ಸೇಟ್, ಯು.ಟಿ ಖಾದರ್ ಹಾಗೂ ಎನ್ ಎ ಹ್ಯಾರಿಸ್ ಅವರಿಗೆ ಮಂತ್ರಿ ಸ್ಥಾನದ ಮೂಲಕ ಪ್ರಾತಿನಿಧ್ಯ ನೀಡಬೇಕಾಗುತ್ತದೆ.

ಹೊಸ ಸಂಪುಟದಲ್ಲಿ ಹಳಬರ ಪೈಕಿ ಶೇ.90ರಷ್ಟು ಮಂದಿ ಉಳಿಯುತ್ತಾರೋ ಇಲ್ಲವೋ ಗೊತ್ತಿಲ್ಲ, ಆದರೆ ಕನಿಷ್ಠ ಅರ್ಧಕ್ಕಿಂತ ಹೆಚ್ಚು ಸಚಿವರು ತಮ್ಮ ಸ್ಥಾನ ಉಳಿಸಿಕೊಳ್ಳಲಿದ್ದಾರೆ ಎನ್ನಲಾಗುತ್ತಿದೆ. ನಾಲ್ಕೈದು ಬಾರಿ ಶಾಸಕರಾದ ಹಲವು ಪ್ರಬಲ ಆಕಾಂಕ್ಷಿಗಳು ಪಕ್ಷದಲ್ಲಿದ್ದಾರೆ. ಮುಂದಿನ ಚುನಾವಣೆಗೆ ಕೇವಲ ಎರಡು ವರ್ಷ ಬಾಕಿ ಇರುವುದರಿಂದ, ಎಲ್ಲರಿಗೂ ಅಧಿಕಾರ ಹಂಚುವುದು ಅಸಾಧ್ಯ. ಪರಿಣಾಮವಾಗಿ, ಸಚಿವ ಸ್ಥಾನ ವಂಚಿತರಿಂದ ನಾಳೆಯಿಂದಲೇ ರಾಜ್ಯದಲ್ಲಿ ಅಧಿಕೃತ ಭಿನ್ನಮತೀಯರ ಗುಂಪೊಂದು ಸೃಷ್ಟಿಯಾಗುವುದು ನಿಶ್ಚಿತ.

ರಾಜ್ಯ ರಾಜಕಾರಣದ ಮುಂದಿನ ದಿನಗಳ ಚಿತ್ರಣದಲ್ಲಿ ಈ ಭಿನ್ನಮತೀಯರ ನಡೆ ಅತ್ಯಂತ ನಿರ್ಣಾಯಕವಾಗಲಿದೆ. ಅಚ್ಚರಿಯ ವಿಚಾರವೆಂದರೆ, ಅಧಿಕೃತವಾಗಿ ಸೃಷ್ಟಿಯಾಗಲಿರುವ ಈ ಅತೃಪ್ತ ಶಾಸಕರು ಮತ್ತು ನಾಯಕರ ಗುಂಪು ಸತತವಾಗಿ ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಂಪರ್ಕಕಕ್ಕೆ ಬರುವುದು ಖಚಿತ. ಡಿ.ಕೆ. ಶಿವಕುಮಾರ್ ನೇತೃತ್ವದ ನೂತನ ಸರ್ಕಾರವು ಈ ಆಂತರಿಕ ಭಿನ್ನಮತವನ್ನು ಹೇಗೆ ನಿಭಾಯಿಸಲಿದೆ ಎಂಬುದನ್ನು ಇಡೀ ಕರ್ನಾಟಕವೇ ಕಾದು ನೋಡಬೇಕಿದೆ.

ವರುಷಗಳ ಸೆರೆವಾಸದ ಬಳಿಕ ಖುಲಾಸೆ: ಕಾನೂನು ಹೋರಾಟದಲ್ಲೇ ಕಳೆದು ಹೋಗುವ ಬದುಕು

10-12 ವರ್ಷಗಳಲ್ಲಿ ಜೈಲಿನಲ್ಲೇ ಇರಿಸಿ ಬಳಿಕ ಕೋರ್ಟ್ 'ನಿರ್ದೋಷಿ' ಎಂದು ಬಿಡುಗಡೆ ಮಾಡಿದರೂ ಕಳೆದುಹೋದ ಗೌರವ, ಉದ್ಯೋಗ ಮತ್ತು ಮಾನಸಿಕ ನೆಮ್ಮದಿಯನ್ನು ಮರಳಿ ನೀಡಲು ಈ ಸರ್ಕಾರಗಳಿಗೆ ಸಾಧ್ಯವೇ? ಬೆಂಕಿಯಿಲ್ಲದೆ ಹೊಗೆ ಆಡುವುದಿಲ್ಲ, ಏನೋ ತಪ್ಪು ಮಾಡಿಯೇ ಜೈಲಿಗೆ ಹೋಗಿರಬೇಕು ಎಂಬ ಸಮಾಜದ ಸಂಶಯದ ದೃಷ್ಟಿ ಈ ನಿದೋರ್ಷಿಗಳನ್ನು ಜೀವಮಾನವಿಡೀ ಕಾಡುತ್ತಲೇ ಇರುತ್ತದೆ. ಇವೆಲ್ಲವುದರಿಂದಾಗುವ ಮಾನಸಿಕ ಆಘಾತಕ್ಕೆ ಹೊಣೆ ಯಾರು?

ದೇಶದಲ್ಲಿ ಭಯೋತ್ಪಾದನೆ ಅಥವಾ ದೇಶದ್ರೋಹದಂತಹ ಗಂಭೀರ ಆರೋಪಗಳ ಮೇಲೆ ಬಂಧಿತರಾಗಿ, ದಶಕಗಳ ಕಾಲ ತಮ್ಮ ಜೀವನದ ಅಮೂಲ್ಯವಾದ ಬದುಕನ್ನು ಜೈಲಿನಲ್ಲಿ ಕಳೆದ ಬಳಿಕ ಕೋರ್ಟ್‌ನಿಂದ ನಿರ್ದೋಷಿ ಎಂದು ಖುಲಾಸೆಗೊಳ್ಳುವ ಪ್ರಕರಣಗಳ ಸಂಖ್ಯೆ ಇತ್ತೀಚಿನ ವರ್ಷಗಳಲ್ಲಿ ಹೆಚ್ಚಾಗುತ್ತಿದೆ. ದೇಶದ ಕಾನೂನು ಪ್ರಕಾರ ಯುಎಪಿಎ ಅಥವಾ ದೇಶದ್ರೋಹದಂತಹ ಕಾಯ್ದೆಗಳಡಿ ಬಂಧನಕ್ಕೊಳಗಾದಾಗ ಜಾಮೀನು ಸಿಗುವುದು ಅತಿ ಕಷ್ಟ, ವಿರಳ. ಇದರ ಪರಿಣಾಮದಿಂದಾಗಿಯೇ ಅದೆಷ್ಟೋ ನಿರಪರಾಧಿಗಳ ಇಡೀ ತಾರುಣ್ಯ ಜೈಲಿನಲ್ಲೇ ಕರಗಿಹೋಗುತ್ತದೆ.

ಅದರಲ್ಲೂ ಕೇಂದ್ರ ಸರ್ಕಾರ, ಪ್ರಧಾನಿ ನರೇಂದ್ರ ಮೋದಿ ಅವರ ನಿಲುವನ್ನು ವಿರೋಧಿಸಿದ ಕಾರಣಕ್ಕೆ, ಮುಸ್ಲಿಂ ಆದ ಕಾರಣಕ್ಕೆ ದೇಶದ್ರೋಹದ ಹಣೆಪಟ್ಟಿ ಪಡೆಯುವ ಈ ಕಾಲದಲ್ಲಿ ಉಮರ್ ಖಾಲಿದ್, ಇಮಾಮ್‌ನಂತೆ ಅದೆಷ್ಟೋ ಯುವಕರ ಜೀವನ ಸೆರೆವಾಸದಲ್ಲೇ ಕಳೆದುಹೋಗುತ್ತಿದೆ. ತನಿಖಾ ಸಂಸ್ಥೆಗಳ ವೈಫಲ್ಯ, ಪುರಾವೆಗಳ ಕೊರತೆ, ಕೇವಲ ಶಂಕೆಯ ಆಧಾರದಲ್ಲಿ ನಡೆಯುವ ಬಂಧನಗಳು ಒಬ್ಬ ವ್ಯಕ್ತಿಯ ಮತ್ತು ಆತನ ಇಡೀ ಕುಟುಂಬದ ಬದುಕನ್ನು ಧ್ವಂಸಗೊಳಿಸುತ್ತವೆ ಎಂಬುದಕ್ಕೆ ಒಡಿಶಾ ನ್ಯಾಯಾಲಯ ಇತ್ತೀಚಿಗೆ ಒಡಿಶಾ ನ್ಯಾಯಾಲಯ ತೀರ್ಪು ನೀಡಿದ ಅಬ್ದುರ್ ರಹಮಾನ್ ಅಲಿ ಖಾನ್ ಪ್ರಕರಣ ಮತ್ತೊಂದು ಪ್ರಮುಖ ಉದಾಹರಣೆಯ ಾಗಿದೆ.

ಏನಿದು ಅಬ್ದುರ್ ರಹಮಾನ್ ಅಲಿ ಖಾನ್ ಪ್ರಕರಣ? ನಿಷೇಧಿತ ಅಲ್ ಖೈದಾ ಉಗ್ರ ಸಂಘಟನೆಯೊಂದಿಗೆ ಸಂಪರ್ಕ ಹೊಂದಿರುವ ಆರೋಪದಲ್ಲಿ 2015ರಲ್ಲಿ ಒಡಿಶಾದ ಕಟಕ್ ಮೂಲದ ಮೌಲ್ವಿ ಅಬ್ದುರ್ ರಹಮಾನ್ ಅಲಿ ಖಾನ್ ಎಂಬಾತನನ್ನು ಬಂಧಿಸಲಾಗಿತ್ತು. ಅಲಿ ಖಾನ್ ಯುವಕರನ್ನು ಸೌದಿ ಅರೇಬಿಯಾಕ್ಕೆ ಕಳುಹಿಸಲು ಯತ್ನಿಸುತ್ತಿದ್ದಾನೆ, ದೇಶವಿರೋಧಿ ಕೃತ್ಯಗಳಿಗಾಗಿ ನಿಧಿ ಸಂಗ್ರಹಿಸುತ್ತಿದ್ದಾನೆ ಎಂಬ ಗಂಭೀರ ಆರೋಪದ ಮೇಲೆ ದೆಹಲಿ ಪೊಲೀಸರ ವಿಶೇಷ ಘಟಕ ಮತ್ತು ಒಡಿಶಾ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಬಂಧಿಸಿದ್ದರು.

2015ರಿಂದ ಈವರೆಗೆ ಅಂದರೆ ಈಗ 2026ರವರೆಗೆ ಸುದೀರ್ಘ ವಿಚಾರಣೆ ನಡೆದಿದೆ. ಇದೀಗ ಒಡಿಶಾದ ಸಲ್ಪುರ್ ಜೆಎಂಎಫ್‌ಸಿ () ನ್ಯಾಯಾಲಯವು ಅಬ್ದುರ್ ರಹಮಾನ್‌ನನ್ನು ಸಂಪೂರ್ಣವಾಗಿ ಖುಲಾಸೆಗೊಳಿಸಿದೆ. ತೀರ್ಪು ಪ್ರಕಟಿಸುವಾಗ ನ್ಯಾಯಾಧೀಶರು ಅತ್ಯಂತ ಕಟು ಶಬ್ದಗಳನ್ನು ಬಳಸಿದ್ದಾರೆ. ''ಆರೋಪಿಯ ವಿರುದ್ಧ ಅಲ್ ಖೈದಾಗೆ ನಿಧಿ ಸಂಗ್ರಹಿಸಿದ ಅಥವಾ ಭಯೋತ್ಪಾದಕ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿದ್ದಕ್ಕೆ ಒಂದೇ ಒಂದು ಎಳೆಯಷ್ಟೂ ಪುರಾವೆ ಇಲ್ಲ'' ಎಂದು ಸ್ಪಷ್ಟವಾಗಿ ಹೇಳಿದ್ದಾರೆ. ಹಾಗೆಯೇ ಕೇವಲ ಶಂಕೆಯ ಆಧಾರದ ಮೇಲೆ ಒಬ್ಬ ವ್ಯಕ್ತಿಯನ್ನು ದೀರ್ಘಕಾಲ ಜೈಲಿನಲ್ಲಿಡುವುದು ಕಾನೂನುಬಾಹಿರ ಎಂದು ಕೋರ್ಟ್ ಸಾರಿದೆ.

ಆದರೆ ಇದೊಂದೇ ಪ್ರಕರಣವಲ್ಲ ಇತರೆ ಪ್ರಕರಣಗಳಲ್ಲಿಯೂ ಇದೇ ರೀತಿ ಅದೆಷ್ಟೋ ಮಂದಿ ಅತ್ತ ವಿಚಾರಣೆಯೂ ನಡೆಯದೆ, ಇತ್ತ ಜಾಮೀನೂ ಸಿಗದೆ ಜೈಲಿನಲ್ಲಿ ಕಳೆಯುತ್ತಿದ್ದಾರೆ. ಈ ಹಿಂದೆ ಭಯೋತ್ಪಾದನೆಯಲ್ಲಿ ತೊಡಗಿರಬಹುದು ಎಂಬ ಶಂಕೆಗೆ ಎಷ್ಟೋ ನಿರಪರಾಧಿ ಮುಸ್ಲಿಂ ಯುವಕರ ಬದುಕು ಬಲಿಯಾಗಿದೆ.

ಹುಬ್ಬಳ್ಳಿ ಪಿತೂರಿ ಪ್ರಕರಣ

2008ರಲ್ಲಿ ಹುಬ್ಬಳ್ಳಿಯಲ್ಲಿ ವೈದ್ಯಕೀಯ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳು ಸೇರಿದಂತೆ 17 ಮುಸ್ಲಿಂ ಯುವಕರನ್ನು ದೇಶದ್ರೋಹ ಮತ್ತು ಉಗ್ರಗಾಮಿ ಸಂಚಿನ ಆರೋಪದ ಮೇಲೆ ಬಂಧಿಸಲಾಗಿತ್ತು. ನಿಷೇಧಿತ ಸಿಮಿ () ಸಂಘಟನೆಯೊಂದಿಗೆ ಸಂಪರ್ಕ ಮತ್ತು ವಿಧ್ವಂಸಕ ಕೃತ್ಯಗಳ ಸಂಚು ನಡೆಸಿದ್ದಾರೆ ಎಂಬ ಆರೋಪವನ್ನು ಈ ವಿದ್ಯಾರ್ಥಿಗಳ ಮೇಲೆ ಮಾಡಲಾಗಿತ್ತು. ಈ ಬಂಧಿತರಲ್ಲಿ ಡಾ. ಆಸಿಫ್ ಇಕ್ಬಾಲ್, ಮಿರ್ಜಾ ತಾರಿಕ್ ಬೇಗ್ ಮೊದಲಾದ ಭವಿಷ್ಯದ ಭರವಸೆಯ ಯುವಕರಿದ್ದರು. ಮುಸ್ಲಿಮರು ಆರೋಪಿ ಸ್ಥಾನದಲ್ಲಿ ಕಾಣುತ್ತಿದ್ದಂತೆ ಮಾಧ್ಯಮಗಳು ಈ ಯುವಕರು ಪಿತೂರಿಯ ಮಾಸ್ಟರ್ ಮೈಂಡ್ಸ್ ಎಂದೆಲ್ಲ ಬಿಂಬಿಸಿ ಗಂಟೆಗಟ್ಟಲೇ ನ್ಯೂಸ್ ಓಡಿಸಿದ್ದವು.

ಆದರೆ ಆಪಾದಿತರ ವಿರುದ್ಧ ಯಾವುದೇ ಸ್ಪಷ್ಟ ಪುರಾವೆಗಳು ಅಥವಾ ಬಾಂಬ್ ತಯಾರಿಸುವ ವಸ್ತುಗಳು ಪತ್ತೆಯಾಗದ ಕಾರಣ ಹುಬ್ಬಳ್ಳಿಯ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು 2015ರಲ್ಲಿ ಎಲ್ಲಾ 17 ಯುವಕರನ್ನು ನಿರ್ದೋಷಿಗಳೆಂದು ಖುಲಾಸೆಗೊಳಿಸಿತು. ಈ ಯುವಕರ 7 ಅಮೂಲ್ಯ ವರ್ಷಗಳು ಜೈಲು ಪಾಲಾದವು. ಅವರ ವೃತ್ತಿಜೀವನವೂ ಸಂಪೂರ್ಣ ನಾಶವಾಯಿತು. ಹೀಗೆ ಸುಳ್ಳು ಆರೋಪಗಳಿಂದಾಗಿ ಮುಗ್ಧ ಯುವಕರ ಜೀವನವೇ ಹಾಳಾಗಿವೆ ಎಂದು ಮಾನವ ಹಕ್ಕುಗಳ ಸಂಘಟನೆಗಳು ದೂರಿದವು.

ಗುಜರಾತ್‌ನ ಅಕ್ಷರಧಾಮ ದೇವಾಲಯದ ದಾಳಿ ಪ್ರಕರಣ

2002ರಲ್ಲಿ ಗುಜರಾತ್‌ನ ಗಾಂಧಿನಗರದ ಅಕ್ಷರಧಾಮ ದೇವಾಲಯದ ಮೇಲೆ ನಡೆದ ದಾಳಿಯಲ್ಲಿ 30ಕ್ಕೂ ಹೆಚ್ಚು ಜನ ಮೃತಪಟ್ಟಿದ್ದರು. ಉಗ್ರರ ದಾಳಿಗೆ ನೆರವು ನೀಡಿದ ಆರೋಪದಲ್ಲಿ ಪ್ರಕರಣದಲ್ಲಿ ಪೋಟ್ಟಾ () ಕಾಯ್ದೆಯಡಿ ಅದಂಭಾಯಿ ಸುಲೇಮಾನ್ ಅಜ್ಮೇರಿ ಮತ್ತು ಅಬ್ದುಲ್ ಕಯೂಮ್ ಸೇರಿದಂತೆ ಆರು ಜನರನ್ನು ಬಂಧಿಸಲಾಗಿತ್ತು. ಆರು ಮಂದಿಗೆ ಕೆಳ ನ್ಯಾಯಾಲಯ ಮರಣದಂಡನೆ ಮತ್ತು ಜೀವಾವಧಿ ಶಿಕ್ಷೆಯನ್ನೂ ವಿಧಿಸಿತ್ತು.

ಆದರೆ 11 ವರ್ಷಗಳ ಬಳಿಕ 2014ರಲ್ಲಿ ಈ ಪ್ರಕರಣವನ್ನು ಕೈಗೆತ್ತಿಕೊಂಡ ಸುಪ್ರೀಂ ಕೋರ್ಟ್, ತನಿಖಾ ಸಂಸ್ಥೆಗಳ ಬೇಜವಾಬ್ದಾರಿತನವನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿತು. ''ನಿಜವಾದ ಅಪರಾಧಿಗಳನ್ನು ಹಿಡಿಯುವ ಬದಲು ತನಿಖಾ ಸಂಸ್ಥೆಗಳು ಮುಗ್ಧರನ್ನು ಸಿಲುಕಿಸಿವೆ'' ಎಂದು ಸುಪ್ರೀಂ ಕೋರ್ಟ್ ಹೇಳಿತು. ಹಾಗೆಯೇ ಸುಪ್ರೀಂ ಕೋರ್ಟ್ ಮರಣದಂಡನೆಗೆ ಒಳಗಾಗಿದ್ದವರೂ ಸೇರಿದಂತೆ ಎಲ್ಲ ಆರೋಪಿಗಳನ್ನು ಗೌರವಪೂರ್ವಕವಾಗಿ ಖುಲಾಸೆಗೊಳಿಸಿತು. ಅಬ್ದುಲ್ ಕಯೂಮ್ ಜೈಲಿನಿಂದ ಬಿಡುಗಡೆಯಾದ ಬಳಿಕ ತಮಗಾದ ಅನ್ಯಾಯದ ಕುರಿತು ಗ್ಯಾರಂಟಿ ಆಫ್ ದಿ ಜೈಲ್ ಡೈರಿ ಎಂಬ ಪುಸ್ತಕ ಬರೆದರು.

ಮಾಲೆಗಾಂವ್ ಬಾಂಬ್ ಸ್ಫೋಟ ಪ್ರಕರಣ-2006

2006ರ ಶಬ್ರಾತ್ ಹಬ್ಬದ ದಿನದಂದು ಮಾಲೆಗಾಂವ್ ಮಸೀದಿ ಬಳಿ ನಡೆದ ಬಾಂಬ್ ಸ್ಫೋಟದಲ್ಲಿ 37 ಜನರು ಸಾವನ್ನಪ್ಪಿದ್ದರು. ಮಹಾರಾಷ್ಟ್ರ ಎಟಿಎಸ್ ಒಂಬತ್ತು ಮುಸ್ಲಿಂ ಯುವಕರನ್ನು ಬಂಧಿಸಿ, ಅವರೇ ಈ ಸ್ಫೋಟದ ರೂವಾರಿಗಳು ಎಂದು ಆರೋಪಿಸಿತು. ತನಿಖೆ ವೇಳೆ ಈ ಮುಸ್ಲಿಮರ ಪಾತ್ರವಿಲ್ಲದಿರುವುದು ಸಾಬೀತಾಗಿ ಎಲ್ಲರೂ ಖುಲಾಸೆಯಾಗಿದ್ದಾರೆ. ತನಿಖೆಯನ್ನು ಕೈಗೆತ್ತಿಕೊಂಡ ರಾಷ್ಟ್ರೀಯ ತನಿಖಾ ಸಂಸ್ಥೆ ಈ ಕೃತ್ಯದಲ್ಲಿ ಹಿಂದೂ ಬಲಪಂಥೀಯ ಸಂಘಟನೆಗಳ ಕೈವಾಡವಿರುವುದನ್ನು ಪತ್ತೆ ಹಚ್ಚಿತು. ದೀರ್ಘ ವಿಚಾರಣೆಯ ನಂತರ 2026ರ ಏಪ್ರಿಲ್‌ನಲ್ಲಿ ಪ್ರಕರಣದ ಅಂತಿಮ ನಾಲ್ವರು ಮುಸ್ಲಿಂ ಆರೋಪಿಗಳನ್ನೂ ದೋಷಮುಕ್ತಗೊಳಿಸಲಾಗಿದೆ. ಹತ್ತು ವರ್ಷಗಳ ಕಾಲ ಕಾನೂನು ಹೋರಾಟದಲ್ಲೇ ಈ ಆರು ಮಂದಿ ಜೀವನ ಕಳೆಯುವಂತಾಗಿತ್ತು.

2008 ಮಾಲೆಗಾಂವ್ ಬಾಂಬ್ ಸ್ಫೋಟ ಪ್ರಕರಣದಲ್ಲೂ ಮುಸ್ಲಿಮರನ್ನೇ ಗುರಿಯಾಗಿಸಲಾಗಿತ್ತು. 2008ರ ಸೆಪ್ಟೆಂಬರ್ 29ರಂದು ಮತ್ತೊಮ್ಮೆ ಮಾಲೆಗಾಂವ್‌ನಲ್ಲಿ ಸ್ಫೋಟ ಸಂಭವಿಸಿ ಆರು ಮಂದಿ ಮೃತಪಟ್ಟಿದ್ದರು. ಈ ಪ್ರಕರಣದಲ್ಲೂ ಪೊಲೀಸರು ಮುಸ್ಲಿಮರನ್ನೇ ಗುರಿಯಾಗಿಸಿ ಕೆಲವರನ್ನು ವಶಕ್ಕೆ ಪಡೆದಿದ್ದರು. ಆದರೆ ಮಹಾರಾಷ್ಟ್ರ ಭಯೋತ್ಪಾದನಾ ನಿಗ್ರಹ ದಳದ ತನಿಖಾಧಿಕಾರಿ ಹೇಮಂತ್ ಕರ್ಕರೆ ಅವರ ನೇತೃತ್ವದ ತನಿಖೆಯಲ್ಲಿ ಇದು ಬಲಪಂಥೀಯ ಸಂಘಟನೆಗಳ ಷಡ್ಯಂತ್ರ ಎಂದು ಬಹಿರಂಗವಾಯಿತು. ನಂತರ ಎನ್‌ಐಎ ನಡೆಸಿದ ತನಿಖೆಯಲ್ಲಿ ಬಂಧಿತ ಮುಸ್ಲಿಮರ ಪಾತ್ರವಿಲ್ಲ ಎಂಬುದು ಸ್ಪಷ್ಟವಾಯಿತು.

ತನಿಖೆಯ ವೇಳೆ ಸ್ಫೋಟಕ್ಕೆ ಬಳಸಲಾಗಿದ್ದ ಮೋಟಾರ್ ಸೈಕಲ್ ಬಿಜೆಪಿಯ ಸಾಧ್ವಿ ಪ್ರಗ್ಯಾ ಸಿಂಗ್ ಠಾಕೂರ್ ಅವರಿಗೆ ಸೇರಿದ್ದು ಎಂಬುದು ಪತ್ತೆಯಾಯಿತು. ಇದರ ಆಧಾರದ ಮೇಲೆ ಸಾಧ್ವಿ ಪ್ರಗ್ಯಾ ಸಿಂಗ್ ಠಾಕೂರ ಲೆಫ್ಟಿನೆಂಟ್ ಕರ್ನಲ್ ಪ್ರಸಾದ್ ಶ್ರೀಕಾಂತ್ ಪುರೋಹಿತ್ ಸೇರಿದಂತೆ ಬಲಪಂಥೀಯ ಸಂಘಟನೆಗಳ ಕಾರ್ಯಕರ್ತರನ್ನು ಬಂಧಿಸಲಾಯಿತು.

ಈ ಎಲ್ಲ ಖುಲಾಸೆ ಪ್ರಕರಣಗಳು ದೇಶದ ಕ್ರಿಮಿನಲ್ ನ್ಯಾಯದಾನ ವ್ಯವಸ್ಥೆಯ ಮುಂದಿರುವ ಗಂಭೀರ ಪ್ರಶ್ನೆಗಳನ್ನು ಎತ್ತಿ ತೋರಿಸುತ್ತವೆ. ಮೊದಲನೆಯದಾಗಿ ಖಚಿತವಾಗಿ ಪುರಾವೆಗಳಿಲ್ಲದೆ, ಕೇವಲ ಶಂಕೆಯ ಆಧಾರದ ಮೇಲೆ ಬಂಧಿಸುವುದು ಸರಿಯೇ? ಅದರಲ್ಲೂ ಮೋದಿ ಸರ್ಕಾರದ ವಿರುದ್ಧ ಮಾತನಾಡಿದವರ ವಿರುದ್ಧವೇ ಯುಎಪಿಎ ಬಳಕೆ ಮಾಡಲಾಗುತ್ತಿಲ್ಲವೇ? ಈ ವೇಳೆ ಆರು ವರ್ಷಗಳಿಂದ ಅತ್ತ ವಿಚಾರಣೆಯೂ ಇಲ್ಲದೆ ಇತ್ತ ಜಾಮೀನೂ ಇಲ್ಲದೆ ಜೈಲಿನಲ್ಲಿರುವ ಸಾಮಾಜಿಕ ಕಾರ್ಯಕರ್ತ ಉಮರ್ ಖಾಲಿದ್ ಮತ್ತು ವಿದ್ಯಾರ್ಥಿ ನಾಯಕ ಶರ್ಜೀಲ್ ಇಮಾಮ್ ಅವರನ್ನು ನೆನೆಯಬೇಕಾಗಿದೆ. 10-12 ವರ್ಷಗಳಲ್ಲಿ ಜೈಲಿನಲ್ಲೇ ಇರಿಸಿ ಬಳಿಕ ಕೋರ್ಟ್ ನಿರ್ದೋಷಿ ಎಂದು ಬಿಡುಗಡೆ ಮಾಡಿದರೂ ಕಳೆದುಹೋದ ಗೌರವ, ಉದ್ಯೋಗ ಮತ್ತು ಮಾನಸಿಕ ನೆಮ್ಮದಿಯನ್ನು ಮರಳಿ ನೀಡಲು ಈ ಸರ್ಕಾರಗಳಿಗೆ ಸಾಧ್ಯವೇ?

ನಿರಪರಾಧಿಗಳು ವಿಚಾರಣಾಧೀನ ಕೈದಿಗಳಾಗಿ ಜೈಲಿನಲ್ಲಿ ಹತ್ತಾರು ವರ್ಷ ಕಳೆದು ಖುಲಾಸೆಗೊಂಡು ಹೊರ ಬಂದಾಗ ಅವರಿಗೆ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗುವಂತೆ ಮಾಡಲು, ಉದ್ಯೋಗ ನೀಡಲು ಈ ಸರ್ಕಾರದಲ್ಲಿ ಯಾವುದೇ ನೀತಿಗಳೂ ಇಲ್ಲ. ಅಷ್ಟಕ್ಕೂ ಅಷ್ಟು ವರ್ಷಗಳ ಕಾಲ ಮಾಧ್ಯಮಗಳು ಆರೋಪಿಯನ್ನು ಅಪರಾಧಿ ಎಂದು ಬಿಂಬಿಸಿರುವಾಗ ನಿರಪರಾಧಿ ಎಂಬ ಸ್ಥಾನವನ್ನು ಈ ಸಮಾಜ ಒಪ್ಪಿಕೊಳ್ಳುತ್ತದೆಯೇ?

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR